MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 05 | ಸಂಚಿಕೆ: 20 | ಮಂಗಳವಾರ : 04-11-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 20 | TUESDAY : 04-11-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಮೊದಲು ನಿಮ್ಮ ತಟ್ಟೆಯಲ್ಲಿರುವ ಹೆಗ್ಗಣ ನೋಡಿಕೊಳ್ಳಿ : ಪ್ರಿಯಾಂಕ್ ಖರ್ಗೆ ವಿರುದ್ಧ ಅಶೋಕ್ ಕಿಡಿ

**ಬೆಂಗಳೂರು,ನ.3–** ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಅವರು ಮೊದಲು ಕಾಂಗ್ರೆಸ್ ಪಕ್ಷದ ತಟ್ಟೆಯಲ್ಲಿ ಬಿದ್ದಿರುವ ಹೆಗ್ಗಣವನ್ನು ಸರಿಪಡಿಸಿಕೊಳ್ಳಲಿ. ನಂತರ ನಮ್ಮ ಪಕ್ಷದ ಬಗ್ಗೆ ಮಾತನಾಡಲಿ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ತಿರುಗೇಟು ನೀಡಿದರು.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾವು ಪ್ರತಿಯೊಂದಕ್ಕೂ ಪ್ರಿಯಾಂಕ ಖರ್ಗೆ ಹೇಳಿದ್ದಕ್ಕೆಲ್ಲ ಉತ್ತರಿಸಲು ಆಗುವುದಿಲ್ಲ. ಅಷ್ಟಕ್ಕೂ ನಮಗೆ ಸವಾಲು ಹಾಕಲು ಅವರ್ಯಾರು? ಮೊದಲು ನಿಮ ತಟ್ಟೆಯಲ್ಲಿ ಬಿದ್ದಿರುವ ಹೆಗ್ಗಣವನ್ನು ಸರಿಪಡಿಸಿಕೊಂಡು ನಂತರ ಸಂಘಪರಿವಾರದ ಬಗ್ಗೆ ಮಾತನಾಡಿ ಎಂದು ತಿರುಗೇಟು ಕೊಟ್ಟರು. ಪ್ರಿಯಾಂಕ್ ಖರ್ಗೆ ನಮನ್ನು ಪ್ರಶ್ನೆ ಮಾಡುವ ಮೊದಲು ಅವರ ಪಕ್ಷವನ್ನು ಪ್ರಶ್ನೆ ಮಾಡಲಿ. ಅವರ ಯಾವುದೇ ಪ್ರಶ್ನೆಗಳಿಗೆ ನಾವು ಉತ್ತರ ಕೊಡುವುದಿಲ್ಲ. ಅವರ ತಟ್ಟೆಯಲ್ಲಿ ನೊಣ ಬಿದ್ದಿದೆ.ಅದರ ಕಡೆ ಮೊದಲು ನೋಡಲಿ. ಇನ್ನೊಬ್ಬರ ತಟ್ಟೆ ಮೇಲೆ ಯಾಕೆ ನೋಡ್ತಾರೆ ಎಂದು ಪ್ರಶ್ನೆ ಮಾಡಿದರು.

ಟನೆಲ್ ರಸ್ತೆ ಯೋಜನೆಗೆ ಅಶೋಕ್ ನೇತೃತ್ವದಲ್ಲಿ ಸಮಿತಿ ಮಾಡೋಣ ಎಂಬ ಡಿಕೆಶಿ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಡಿಕೆಶಿ ಸಮಿತಿ ಮಾಡಲಿ, ನಾನು ಸಮಿತಿಗೆ ಅಧ್ಯಕ್ಷ ಆಗಲು ಒಪ್ಪುತ್ತೇನೆ. ಆದರೆ ಮೊದಲು ರಸ್ತೆ ಗುಂಡಿ ಮುಚ್ಚಲಿ, ಕಸ ಸಮಸ್ಯೆ ಬಗೆಹರಿಸಿ ನಂತರ ನನಗೆ ಆಹ್ವಾನ ಕೊಡಲಿ ಎಂದು ಟಕ್ಕರ್ ಕೊಟ್ಟರು.

ನಿಮ ಬಳಿ ಟನೆಲ್ ರೋಡ್ ಮಾಡುವುದಕ್ಕೆ ಹಣ ಇಲ್ಲ. ಇನ್ನು ಸಮಿತಿ ಮಾಡಿ ಹಣ ಯಾಕೆ ಪೋಲು ಮಾಡುತ್ತಿರಿ ಟನೆಲ್ ರಸ್ತೆ ಬಗ್ಗೆ ಸರಿಯಾದ ಚರ್ಚೆಯಾಗಿಲ್ಲ. ಬೆಂಗಳೂರು ಜನತೆಯಅಭಿಪ್ರಾಯ ಪಡೆದಿಲ್ಲ. 120 ಇಲಾಖೆಗಳ ಅನುಮತಿ ಬೇಕು, ಒಂದು ಇಲಾಖೆಯಿಂದಲೂ ಅನುಮತಿ ಪಡೆದಿಲ್ಲ ಎಂದು ಆಕ್ಷೇಪಿಸಿದರು.

ನಾವು ಅಭಿವೃದ್ಧಿ ವಿರೋಧಿಗಳಲ್ಲ. ಟನೆಲ್ ರೋಡ್ ಮಾಡುವ ಮುನ್ನ ಎಲ್ಲ ರಸ್ತೆಗುಂಡಿ ಮುಚ್ಚಿ, ನಗರದ ಕಸ ತೆಗೆಯಬೇಕು. ಅದು ಬಿಟ್ಟು ಧಮಕಿ ಹಾಕುವುದು, ಮಾಡೇ ಮಾಡುತ್ತೆ?ವೆಂದು ಮೊಂಡುತನ ತೋರುವುದು, ಪರಿಸರಕ್ಕೆ ಹಾನಿ ಮಾಡುವುದು, ಕೆಂಪೇಗೌಡರ ಗೋಪುರ ಒಡೆಯಲು ಹೋಗುವುದು ಯಾಕೆ? ಎಂದು ಪ್ರಶ್ನೆ ಮಾಡಿದರು. ಜನರ ದನಿಯನ್ನು ಅರ್ಥ ಮಾಡಿಕೊಂಡು ಯೋಜನೆ ಮಾಡಿ. ಟನೆಲ್ ರಸ್ತೆ ಯೋಜನೆ ಮೂಲಕ ದೌರ್ಜನ್ಯ ಮಾಡುವುದು ಸರಿಯಲ್ಲ ಎಂದು ಹೇಳಿದರು.

ನವೆಂಬರ್‌ನಲ್ಲಿ ಕ್ರಾಂತಿ ಆಗುತ್ತದೆ ಎಂದು ಕಾಂಗ್ರೆಸ್‌ನವರೇ ಮಾತನಾಡುತ್ತಿದ್ದಾರೆ. ರಾಜಣ್ಣ ಕ್ರಾಂತಿ ಬಗ್ಗೆ ಮಾತಾಡಿ ಮಂತ್ರಿ ಸ್ಥಾನ ಕಳೆದುಕೊಂಡರು. ರಾಮನಗರ ಶಾಸಕ ಮಾತಾಡಿದರು. ಅವರ ಕಡೆಯವರೇ ಕ್ರಾಂತಿ ಬಗ್ಗೆ ಮಾತನಾಡುತ್ತಿರುವುದು. ನಾವು ಕ್ರಾಂತಿ ಬಗ್ಗೆ ಮಾತನಾಡುತ್ತಿಲ್ಲ. ನಾವು ಅಭಿವೃದ್ಧಿ ಮಾಡಿ ಎನ್ನುತ್ತಿದ್ದೇವೆ. ಕ್ರಾಂತಿ ಭ್ರಾಂತಿ ಎಲ್ಲ ಅವರ ಪಕ್ಷದಲ್ಲೆ? ನಡೆಯುತ್ತಿದೆ ಎಂದು ಸ್ಪಷ್ಟಪಡಿಸಿದರು.

ರಾಷ್ಟ್ರೀಯ ಏಕತಾ ದಿನಾಚರಣೆ ಅಂಗವಾಗಿ ರಾಯಚೂರಲ್ಲಿ ಆರೋಗ್ಯ ತಪಾಸಣಾ ಶಿಬಿರ

## ಪ್ರತಿಯೊಬ್ಬರು ನಿಯಮಿತ ಆರೋಗ್ಯ ತಪಾಸಣೆ ಮಾಡಿಸಿ: ಜಿಪಂ ಸಿಇಓ ಸಲಹೆ

ಯುವ ಮಾರ್ಗ ಸುದ್ದಿ

**ರಾಯಚೂರು,ನ.3–**ಇಂದಿನ ಆಧುನೀಕತೆಯ ಒತ್ತಡದ ಜೀವನ ಶೈಲಿಯಿಂದಾಗಿ ನಗರ, ಗ್ರಾಮೀಣ ಎನ್ನದೆ ಎಲ್ಲಡೆ ಕಂಡು ಬರುತ್ತಿರುವ ರಕ್ತದೊತ್ತಡ, ಸಕ್ಕರೆ ಕಾಯಿಲೆ, ಕ್ಯಾನ್ಸರ್‌ನಂತಹ ಕಾಯಿಲೆಗಳನ್ನು ಆರಂಭದಲ್ಲಿಯೇ ಗುರುತಿಸಿ ಚಿಕಿತ್ಸೆ ಪಡೆದುಕೊಳ್ಳಬೇಕು. ನಿಯಮಿತ ಆರೋಗ್ಯ ತಪಾಸಣೆಗೆ ಮತ್ತು ವ್ಯಾಯಾಮಕ್ಕೆ ಒತ್ತು ಕೊಡವೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ ಅವರು ಹೇಳಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರಿಮ್ಸ್, ಅಸಾಂಕ್ರಾಮಿಕ ರೋಗಗಳ ಘಟಕ, ಜಿಲ್ಲಾ ಅಂಧತ್ವ ನಿಯಂತ್ರಣ ವಿಭಾಗ, ಜಿಲ್ಲಾ ಮಾನಸಿಕ ಆರೋಗ್ಯ ವಿಭಾಗ ಇವರ ಸಹಯೋಗದಿಂದ ರಾಷ್ಟ್ರೀಯ ಏಕತಾ ದಿನಾಚರಣೆಯ ಅಂಗವಾಗಿ ಇತ್ತೀಚೆಗೆ ನಡೆದ ಆರೋಗ್ಯ ತಪಾಸಣಾ ಶಿಬಿರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಅತಿಯಾದ ಕೊಬ್ಬಿನಾಂಶ ಪದಾರ್ಥಗಳ ಬಳಕೆ, ವ್ಯಾಯಾಮದಡೆ ನಿರಾಸಕ್ತಿ, ತಂಬಾಕು, ಆಲ್ಕೋಹಾಲ್ ನಂತಹ ಪದಾರ್ಥಗಳ ಬಳಕೆಯಿಂದ ರಕ್ತದೊತ್ತಡ, ಸಕ್ಕರೆ ಕಾಯಿಲೆಯಂತಹ ರೋಗಿಗಳ ಸಂಖ್ಯೆ ಹೆಚ್ಚುತ್ತಿದ್ದು, ಅದರಲ್ಲೂ ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ ಈ ಪ್ರಮಾಣ ಹೆಚ್ಚಾಗುತ್ತಿದೆ. ಇದಕ್ಕಾಗಿ ಜಿಲ್ಲೆಯಾದ್ಯಂತ ಗೃಹ ಆರೋಗ್ಯ ಯೋಜನೆ ಕುರಿತು ಜನಜಾಗೃತಿ ಶಿಬಿರಗಳನ್ನು ನಿರಂತರ ಹಮ್ಮಿಕೊಂಡು ಮೂವತ್ತು ವರ್ಷ ಮೇಲ್ಪಟ್ಟ ಪ್ರತಿಯೊಬ್ಬರ ನಿಯಮಿತ ಆರೋಗ್ಯ ತಪಾಸಣೆ ಕೈಗೊಳ್ಳಬೇಕೆಂದರು.

ಇದೆ ವೇಳೆ, ಸಿಇಓ ಅವರು ಆರೋಗ್ಯ ಶಿಬಿರದಲ್ಲಿ ಭಾಗಿಯಾಗಿ ವಿವಿಧ ಪರೀಕ್ಷೆಗಳನ್ನು ಮಾಡಿಸಿಕೊಂಡರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜಾರಿ, ಯೋಜನಾ ನಿರ್ದೇಶಕರಾದ ಶರಣಬಸವರಾಜ, ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ, ಕಾರ್ಯನಿರ್ವಾಹಕ ಅಭಿಯಂತರರು ಶಿವಪ್ಪ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರ ಬಾಬು, ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ನಂದಿತಾ ಎಮ್.ಎನ್, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಗಣೇಶ್, ರಿಮ್ಸ್ ಎನ್‌ಸಿಡಿ ಫಿಜಿಷಿಯನ್ ಡಾ.ಶ್ರೀನಿವಾಸ್ ಸೇರಿದಂತೆ ಜಿಲ್ಲಾ ಪಂಚಾಯತ ಹಾಗೂ ಎನ್‌ಸಿಡಿ, ಮಾನಸಿಕ ಆರೋಗ್ಯ, ಅಂಧತ್ವ ವಿಭಾಗದ ಅಧಿಕಾರಿ, ಸಿಬ್ಬಂದಿ ಇದ್ದರು.

ಶಾಲೆ ಕೊಠಡಿ ಹಾಗೂ ಸಿಸಿ ರಸ್ತೆಗೆ ಭೂಮಿ ಪೂಜೆ

## ಕಾಂಗ್ರೆಸ್ ಬೋಗಸ್ ಸರ್ಕಾರ : ಶಾಸಕ ವಜ್ಜಲ್ ವಾಗ್ದಾಳಿ

ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ನ.3–**ರಾಜ್ಯದಲ್ಲಿ ಇರುವ ಕಾಂಗ್ರೆಸ್ ಸರ್ಕಾರ ಸುಳ್ಳು ಹೇಳುತ್ತಾ ಅಭಿವೃದ್ಧಿಯ ಬಗ್ಗೆ ಚಿಂತನೆ ಇಲ್ಲದೆ ಬೋಗಸ್ ಹೇಳುವ ಸರ್ಕಾರವಾಗಿದೆ. ಗ್ಯಾರಂಟಿ ಹೆಸರಲ್ಲಿ ರಾಜ್ಯದ ಜನತೆಗೆ ಅನ್ಯಾಯ ಮಾಡುತ್ತಿದೆ ಎಂದು ಶಾಸಕ ಮಾನಪ್ಪ ವಜ್ಜಲ್ ವಾಗ್ದಾಳಿ ನಡೆಸಿದರು.



ತಾಲೂಕಿನ ಹುನಕುಂಟಿ ಗ್ರಾಮದಲ್ಲಿ ಶಾಲಾ ಕೊಠಡಿ ಹಾಗೂ ಸಿಸಿ ರಸ್ತೆ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದ ಅವರು, ಕ್ಷೇತ್ರದ ಪ್ರತಿ ಹಳ್ಳಿಗೆ ಒಂದು ಕೋಟಿಯಿಂದ ಐವತ್ತು ಲಕ್ಷ ರೂಪಾಯಿ ಅನುದಾನ ನೀಡಿ ಗ್ರಾಮವನ್ನು ಅಭಿವೃದ್ಧಿ ಪಡಿಸಲು ಪಣತೊಟ್ಟಲಾಗಿದೆ.

**ಜನರನ್ನು ಮರಳು ಮಾಡುವ ಸರ್ಕಾರ** : ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆ ಹೆಸರಲ್ಲಿ ಜನರನ್ನು ಮರಳು ಮಾಡಿ ದಾರಿ ತಪ್ಪಿಸುತ್ತದೆ, ರಾಜ್ಯ ಅಭಿವೃದ್ಧಿಯಲ್ಲಿ ಶೂನ್ಯ ಸಾಧನೆ ಮಾಡಿದೆ ಇದನ್ನು ಮರೆಮಾಚಲು ದಿನಕ್ಕೊಂದು ವಿವಾದಾತ್ಮಕ ಹೇಳಿಕೆ ನೀಡುತ್ತ ಜನರನ್ನು ಮರಳು ಮಾಡುತ್ತದೆ.

ಬೆಳೆ ಪರಿಹಾರ ನೀಡದೆ ಕಾರಣಹರಣ ಮಾಡುವ ಸರ್ಕಾರ : ಅತಿಯಾದ ಮಳೆಯಿಂದ ರಾಜ್ಯದ ಬಹುತೇಕ ಜಿಲ್ಲೆಯಲ್ಲಿ ಹಾನಿ ಉಂಟಾಗಿದೆ ರೈತರಿಗೆ ಪರಿಹಾರ ನೀಡಬೇಕಾದ ರಾಜ್ಯ ಸರ್ಕಾರ ಸುಖಾಸುಮ್ಮನೆ ಕಾಲಹರಣ ಮಾಡಿ ರೈತರಿಗೆ ಅನ್ಯಾಯ ಮಾಡುತ್ತದೆ.

**ಅನ್ನಭಾಗ್ಯದಲ್ಲಿ ಭ್ರಷ್ಟಾಚಾರ** : ರಾಜ್ಯ ಸರ್ಕಾರ ಅನ್ನ ಭಾಗ್ಯದ ಹೆಸರಲ್ಲಿ ರಾಜ್ಯದ ಬಡ ಜನತೆಗೆ ವಿತರಿಸಬೇಕಾದ ಅಕ್ಕಿಯ ತೂಕದಲ್ಲಿ ಮೋಸ ಮಾಡುತ್ತಾ ಜನರಿಗೆ ಮಂಕು ಬೂದಿ ಎರಚುತ್ತಿದೆ.

**ಅನುದಾನದಲ್ಲಿ ತಾರತಮ್ಯ** : ರಾಜ್ಯ ಸರ್ಕಾರ ಶಾಸಕರಿಗೆ ನೀಡಬೇಕಾದ ಅನುದಾನದಲ್ಲಿ ಕಾಂಗ್ರೆಸ್ ಶಾಸಕರಿಗೆ ಹೆಚ್ಚು ಅನುದಾನ ನೀಡಿ, ಬಿಜೆಪಿ ಶಾಸಕರು ಇರುವ ಕ್ಷೇತ್ರಕ್ಕೆ ಕಡಿಮೆ ಅನುದಾನ ನೀಡಿ ಮಲತಾಯಿ ಧೋರಣೆ ತೋರುತ್ತದೆ. ಇದು ಬಿಜೆಪಿ ಶಾಸಕರಿಗೆ ಮಾಡಿದ ಮೋಸ ಅಲ್ಲ ಇಡೀ ರಾಜ್ಯದ ಜನತೆಗೆ ಮಾಡಿದ ಮೋಸವಾಗಿದೆ ಎಂದು ಆರೋಪಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಮಂಡಲ ಅಧ್ಯಕ್ಷ ಕೆ.ನಾಗಭೂಷಣ, ಬಿಜೆಪಿ ಮುದಗಲ್ ಮಂಡಲ ಅಧ್ಯಕ್ಷ ಹುಲ್ಲೇಶ ಸಾಹುಕಾರ್, ಎಇಇ ಹನುಮಂತಪ್ಪ, ಮುಖಂಡರಾದ ಅಯ್ಯಪ್ಪ ವಕೀಲರು, ಲಿಂಗಣ್ಣ ದೇವಕೆರಿ, ಭೀಮಣ್ಣ ಹೀರೆಮನಿ, ವೆಂಕನಗೌಡ ಐದನಾಳ, ಬಸವರಾಜ ಹುನಕುಂಟಿ, ಸಂಜೀವಪ್ಪ ಹುನಕುಂಟಿ ಸೇರಿದಂತೆ ಗ್ರಾಮಸ್ಥರು ಇದ್ದರು.

## ದಲಿತ ಅಥವಾ ಮುಸ್ಲಿಂ ಸಮುದಾಯಕ್ಕೆ ಸಿಎಂ ಸ್ಥಾನ ನೀಡಲು ಆಗ್ರಹ

**ಬೆಂಗಳೂರು, ನ.3–**ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆ ಮಾಡುವುದಾದರೆ ದಲಿತ ಅಥವಾ ಮುಸ್ಲಿ?ಂ ಸಮುದಾಯದ ನಾಯಕರಿಗೆ ಅವಕಾಶ ಮಾಡಿಕೊಡಬೇಕು ಎಂದು ಉತ್ತರ ಕರ್ನಾಟಕದ ರೈತ ಮುಖಂಡ ಯಾಸೀನ ಜವಳಿ ಆಗ್ರಹಿಸಿದ್ದಾರೆ.

ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು, ಕಾಂಗ್ರೆಸ್ ಪಕ್ಷದ ಬೆನ್ನೆಲುಬಾಗಿರುವ ದಲಿತ ಹಾಗೂ ಮುಸ್ಲಿಂ ಸಮುದಾಯದವರು ಇದುವರೆಗೂ ಮುಖ್ಯಮಂತ್ರಿಯಾಗಿಲ್ಲ. ಈ ಸಮುದಾಯದವರು ಕೇವಲ ಮತ ಹಾಕಲು ಮಾತ್ರ ಬೇಕೆ ಅಧಿಕಾರ ಬಂದಾಗ ಈ ಸಮುದಾಯಕ್ಕೆ ಪ್ರಾತಿನಿಧ್ಯ ಬೇಡವೇ ಎಂ ಪ್ರಶ್ನಿಸಿದ್ದಾರೆ.

ಈ ಸಮುದಾಯಗಳಿಗೆ ಕಾಂಗ್ರೆಸ್ ಆದ್ಯತೆ ನೀಡುವುದಾದರೆ ಈ ವರ್ಗದ ನಾಯಕರಿಗೆ ಮುಖ್ಯಮಂತ್ರಿ ಸ್ಥಾನ ನೀಡಿ, ಇಲ್ಲವಾದರೆ ಯಾವ ಕಾರಣಕ್ಕೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಅಧಿಕಾರದಿಂದ ಕೆಳಗಿಳಿಸಬೇಡಿ. ಒಂದು ವೇಳೆ ಅವರನ್ನು ಕೆಳಗಿಳಿಸಿದರೆ ದಲಿತ ಅಥವಾ ಮುಸ್ಲಿ?ಂ ಸಮುದಾಯದವರನ್ನು ಮುಖ್ಯಮಂತ್ರಿಯನ್ನಾಗಿ ಮಾಡಿ ಎಂದು ಒತ್ತಾಯಿಸಿದ್ದಾರೆ.

ಎರಡನೇ ಬಾರಿ ರಾಜ್ಯದ ಅಧಿಕಾರದ ಚುಕ್ಕಾಣಿ ಹಿಡಿದಿರುವ ಸಿದ್ದರಾಮಯ್ಯ ಅವರನ್ನು ಅಧಿಕಾರದಿಂದ ಕೆಳಗಿಳಿಸುವ ಪ್ರಯತ್ನ ನಡೆಯುತ್ತಿದೆ. ಇದು ನಿಜವೇ ಆಗಿದ್ದರೆ ಕಾಂಗ್ರೆಸ್ ಪಕ್ಷ ದೊಡ್ಡ ಹಿನ್ನೆಡೆ ಅನುಭವಿಸಲಿದೆ. ಕಾಂಗ್ರೆಸ್‌ನಲ್ಲಿ ಮಾಸ್ ಲೀಡರ್ ಯಾರೂ ಇಲ್ಲದಂತಾಗುತ್ತದೆ ಎಂದು ಅವರು ಹೇಳಿದ್ದಾರೆ.

## ಕುಷ್ಠರೋಗ ಪತ್ತೆ ಹಚ್ಚುವ ಅಂದೋಲನ ಅಂಗವಾಗಿ ಆರೋಗ್ಯ ಇಲಾಖೆಯಿಂದ ಜಾಗೃತಿ ಜಾಥಾ

ಯುವ ಮಾರ್ಗ ಸುದ್ದಿ

**ಮಾನ್ವಿ,ನ.3–**ಪಟ್ಟಣದ ಸಾರ್ವಜನಿಕ ಸರ್ಕಾರಿ ಆಸ್ಪತ್ರೆಯ ಆವರಣದಲ್ಲಿ ಆರೋಗ್ಯ ಇಲಾಖೆ ವತಿಯಿಂದ ಸ್ಪರ್ಶ್ ಕುಷ್ಠರೋಗ ನಿರ್ಮೂಲನ ಕಾರ್ಯಕ್ರಮ ಅಂಗವಾಗಿ ಕುಷ್ಠರೋಗ ಪತ್ತೆ ಹಚ್ಚುವ ಅಂದೋಲನಕ್ಕೆ ತಾಲೂಕು ಆರೋಗ್ಯಧಿಕಾರಿ ಡಾ.ಶರಣಬಸವರಾಜ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿ ಮಾತನಾಡಿ, ತಾಲೂಕಿನಾದ್ಯಂತ ನ.3 ರಿಂದ ನ.19 ರವರೆಗೆ ಸಾರ್ವಜನಿಕರಿಗೆ ಕುಷ್ಠರೋಗದ ಬಗ್ಗೆ ಅರಿವು ಮತ್ತು ಜಾಗೃತಿ ಮೂಡಿಸುವ ಅಂಗವಾಗಿ ಕುಷ್ಠರೋಗ ಪತ್ತೆ ಹಚ್ಚುವ ಅಂದೋಲನವನ್ನು ಹಮ್ಮಿಕೊಳ್ಳಲಾಗಿದ್ದು. ಆರೋಗ್ಯ ಇಲಾಖೆಯಿಂದ ಪ್ರತಿ ಮನೆ ಮನೆಗೆ ತೆರಳಿ ಕುಷ್ಟರೋಗದ ಬಗ್ಗೆ ಜಾಗೃತಿ ಮೂಡಿಸಿ ಕುಷ್ಟರೋಗದ ಲಕ್ಷಣಗಳಿರುವವರು ಕಂಡು ಬಂದಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿನ ವೈದ್ಯರಿಂದ ಪರೀಕ್ಷಿಸಿ ಅಗತ್ಯವಾದ ಉಚಿತ ಚಿಕಿತ್ಸೆಯನ್ನು ನೀಡಲಾಗುವುದು. ಕುಷ್ಠರೋ ಗವು ಮೈಕೋಬ್ಯಾಕ್ಟೀರಿಯಂ ಲೆಪ್ರ ಎಂಬ ಸೂಕ್ಷ್ಮಾಣುವಿನಿಂದ ಬರುವ ಚರ್ಮ ಹಾಗೂ ನರಗಳಿಗೆ ಸಂಬಂದಿಸಿದ ಕಾಯಿಲೆಯಾಗಿದ್ದು ದೇಹದ ಯಾವುದೇ ಭಾಗದಲ್ಲಿ ಸ್ಪರ್ಶಜ್ಞಾನವಿಲ್ಲದೆ ತಿಳಿಬಿಳಿ ಅಥಾವಾ ತಾಮ್ರ ಬಣ್ಣದ ಮಚ್ಚೆಗಳಿಂದ ಕೂಡಿದು ಕೂದಲು ,ನವೆ,ತುರಿಕೆ ಇಲ್ಲದೆ ಇರುವುದು.ಕೈಕಾಲುಗಳಲ್ಲಿ ಜೋಮು,ಸ್ಪರ್ಶಜ್ಞಾನ ಇಲ್ಲದೆ ಇರುವುದು.ಹೊಳೆಯುವ ಚರ್ಮ ಇವುಗಳು ಪ್ರಮುಖ ಲಕ್ಷಣಗಳಾಗಿದ್ದು ನಮ್ಮ ಆರೋಗ್ಯ ಇಲಾಖೆಯ ಆರೋಗ್ಯ ಶಿಕ್ಷಣಾಧಿಕಾರಿಗಳು,ಆಶಾಕಾರ್ಯಕರ್ತರು ಮನೆ,ಮನೆಗೆ ಭೇಟಿ ನೀಡಿ ಜನರಲ್ಲಿ ಕುಷ್ಟರೋಗದ ಬಗ್ಗೆ ಜಾಗೃತಿ ಮೂಡಿಸಿ ಲಕ್ಷಣಗಳು ಕಂಡುಬಂದಲ್ಲಿ ವೈದ್ಯರು ಹೆಚ್ಚಿನ ಪರೀಕ್ಷೆ ಮಾಡಿ ಅಗತ್ಯ ಚಿಕಿತ್ಸೆ ನೀಡುತ್ತಾರೆ .ಕುಷ್ಟರೋಗದ ಪ್ರಾರಂಬೀಕ ಲಕ್ಷಣಗಳು ಕಂಡು ಬಂದಾಗ ಬಹು ಔಷಾಧಿ ಚಿಕಿತ್ಸ ಪದ್ದತಿಯಿಂದ ಸಂಪೂರ್ಣವಾಗಿ ಗುಣಪಡಿಸಬಹುದು ಮತ್ತು ಕ್ರಮಬದ್ದವಾದ ಚಿಕಿತ್ಸೆ ಹಾಗೂ ಅರೈಕೆ ನೀಡಿದಲ್ಲಿ ಅಂಗವಿಕಲತೆಯನ್ನು ತಡೆಯಬಹುದು ಎಂದು ತಿಳಿಸಿದರು.




ಪಟ್ಟಣದ ಪ್ರಮುಖ ಬೀದಿಗಳಲ್ಲಿ ಕುಷ್ಠರೋಗ ನಿರ್ಮೂಲನೆ ಅಂಗವಾಗಿ ಜಾಗೃತಿ ಜಾಥ ನಡೆಯಿತು.

ಜಿಲ್ಲಾ ಉಪ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ, ಆಸ್ಪತ್ರೆಯ ನೇತ್ರ ತಜ್ಞರಾದ ಡಾ.ಶಿಲ್ಪನಾಯಕ್, ಎಸ್.ಟಿ.ಎಸ್.ಅಧಿಕಾರಿ ಶಿವರಾಜ,ಪಿ.ಹೆಚ್.ಸಿ. ಅಧಿಕಾರಿ ಚೈತ್ರ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಸುದೀರ್ ಬಾಬು. ಕಿರಿಯ ಆರೋಗ್ಯ ಶಿಕ್ಷಣಾಧಿಕಾರಿ ಬಾಬು ಚಿನ್ನು ಸೇರಿದಂತೆ ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಹಾಗೂ ಆಶಾಕಾರ್ಯಕರ್ತರು ಸೇರಿದಂತೆ ಇನ್ನಿತರರು ಇದ್ದರು.

## ಗೌರವ ಧನ ಹಣ ದೇವಸ್ಥಾನ ನಿರ್ಮಾಣಕ್ಕೆ 5 ಲಕ್ಷ ರೂಪಾಯಿ ದೇಣಿಗೆ ನೀಡಿದ ಶಾಸಕ ಮಾನಪ್ಪ ವಜ್ಜಲ್

ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ನ.3–** ತಾಲೂಕಿನ ಹುನಕುಂಟಿ ಗ್ರಾಮದ ಆರಾಧ್ಯ ದೈವ ಶ್ರೀ ಬಸವೇಶ್ವರ ದೇವಸ್ಥಾನ ನಿರ್ಮಾಣ ಕಾರ್ಯಕ್ಕೆ ವಯಕ್ತಿ ಕವಾಗಿ ಆ ಕೈಜೋಡಿಸುತ್ತಿದ್ದು, ಅದಕ್ಕಾಗಿ 5 ಲಕ್ಷ ರೂಪಾಯಿ ದೇಣಿಗೆ ನೀಡುತ್ತಿದ್ದೇನೆ. ಎಂದು ಶಾಸಕ ಮಾನಪ್ಪ ವಜ್ಜಲ್ ದೇವಸ್ಥಾನ ಸಮಿತಿಗೆ ಹಣ ನೀಡಿದರು.



ಸೋಮವಾರ ಹುನಕುಂಟಿ ಗ್ರಾಮದಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ಪಾಲ್ಗೊಂಡಿದ್ದ ಶಾಸಕರಿಗೆ ಗ್ರಾಮಸ್ಥರು ಭೇಟಿಯಾಗಿ, ಬಸವೇಶ್ವರ ದೇವಸ್ಥಾನದ ಕಾಮಗಾರಿ ಅರ್ಧಕ್ಕೆ ನಿಂತಿದ್ದು, ಸಹಾಯಕ್ಕೆ ಮನವಿ ಮಾಡಿದರು. ಕೂಡಲೇ ಸ್ಪಂಧಿಸಿದ ಶಾಸಕರು ಸರಕಾರದಿಂದ ಬರುವ ಗೌರವ ಧನದ ಮೊತ್ತದಲ್ಲಿ 5 ಲಕ್ಷ ರೂಪಾಯಿಗಳನ್ನು ದೇಣಿಗೆಯಾಗಿ ನೀಡಿದರು. ಶಾಸಕರ ಈ ಕಾರ್ಯಕ್ಕೆ ಗ್ರಾಮಸ್ಥರು ಮೆಚ್ಚುಗೆ ವ್ಯಕ್ತಪಡಿಸಿದರು.

ಯುವ ಮಾರ್ಗ



# ರಾಯಚೂರು ಜಿಲ್ಲೆಯಲ್ಲಿ ಕುಷ್ಠರೋಗ ಪತ್ತೆ ಹಚ್ಚುವ ಆಂದೋಲನಕ್ಕೆ ಚಾಲನೆ



ಯುವ ಮಾರ್ಗ ಸುದ್ದಿ

**ರಾಯಚೂರು,ನ.3–**ನವ್ಹಂಬರ್ 03 ರಿಂದ 19 ರವರೆಗೆ ರಾಯಚೂರು ಜಿಲ್ಲೆಯಾದ್ಯಂತ ನಡೆಯಲಿರುವ ಕುಷ್ಠರೋಗ ಪತ್ತೆ ಹಚ್ಚುವ ಅಭಿಯಾನಕ್ಕೆ ನವೆಂಬರ್ 3ರಂದು ಚಾಲನೆ ನೀಡಲಾಯಿತು.

ಅಭಿಯಾನದ ಅಂಗವಾಗಿ ಆಯೋಜನೆ ಮಾಡಿದ್ದ ಜಾಗೃತಿ ಜಾಥಾಕ್ಕೆ ಮಹಾನಗರ ಪಾಲಿಕೆಯ ಸದಸ್ಯರಾದ ಉಮಾ ರವೀಂದ್ರ ಜಾಲ್ದಾರ ಚಾಲನೆ ನೀಡಿದರು.

ರಾಯಚೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ, ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮ, ಜಿಲ್ಲಾ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮದಡಿ ಜಹಿರಾಬಾದ್ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರಬಾಬು ಮಾತನಾಡಿ, ಸಾವಿರಾರು ವರ್ಷಗಳಿಂದ ಇಂದಿಗೂ ಸಮುದಾಯದಲ್ಲಿ ಉಳಿದಿರುವ ಹಾಗೂ ಸೂಕ್ತ ಚಿಕಿತ್ಸೆಯಿಂದ ಗುಣಪಡಿಸಬಹುದಾದ ನರ ಮತ್ತು ಚರ್ಮ ರೋಗದ ಖಾಯಿಲೆ ಕುಷ್ಠರೋಗವಾಗಿದ್ದು ಕನಿಷ್ಟ 6 ತಿಂಗಳಿನಿಂದ ಒಂದು ವರ್ಷದವರೆಗೆ ತಪ್ಪದೆ ಚಿಕಿತ್ಸೆ ಪಡೆಯು ವ ಮೂಲಕ ರೋಗ ನಿರ್ಮೂಲನೆಗೆ ಕೈಜೊಡಿಸಲು ಜನತೆ ಮುಂದೆ ಬರಬೇಕು ಎಂದು ಸಾರ್ವಜನಿಕರಲ್ಲಿ ಮನವಿ ಮಾಡಿದರು.

**ಕ್ಷಯರೋಗ ಪತ್ತೆ ಆಂದೋಲನ:** ಇದೇ ಅವಧಿಯಲ್ಲಿ, ಸಕ್ರೀಯ ಕ್ಷಯರೋಗ ಪತ್ತೆ ಮತ್ತು ಚಿಕಿತ್ಸಾ ಆಂದೋಲನ ಜರಗುತ್ತಿದ್ದು, ಎರಡು ವಾರಕ್ಕಿಂತ ಹೆಚ್ಚು ದಿನಗಳ ಕೆಮ್ಮು ಇದ್ದಲ್ಲಿ ಕಫ ಪರೀಕ್ಷೆ ಮಾಡಿಸಲು ಒಂದು ವೇಳೆ, ಟಿಬಿ ಇದೆ ಎಂದು ಖಚಿತಪಟ್ಟಲ್ಲಿ 06 ತಿಂಗಳ ಅವಧಿಯವರೆಗೆ ಚಿಕಿತ್ಸಾ ರೂಪದಲ್ಲಿ ಮಾತ್ರೆಗಳನ್ನು ಸೇವಿಸಿ ಗುಣಮುಖರಾಗಲು ಹಾಗೂ ಮಾತ್ರೆಗಳನ್ನು ಎಲ್ಲ ಸರಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ನೀಡಲಾಗುವುದು. ಮುಖ್ಯವಾಗಿ ಚಿಕಿತ್ಸೆಯ ಬಗ್ಗೆ ನಿರ್ಲಕ್ಷಿಸದೆ, ಎಮ್‌ಡಿಆರ್ ಟಿಬಿಯಾಗಿ ಬದಲಾಗುವುದನ್ನು ತಪ್ಪಸಲು ವೈದ್ಯರ ಸಲಹೆಯಂತೆ ಚಿಕಿತ್ಸೆ ಪಡೆಯಲು ಡಿಎಚ್‌ಓ ವಿನಂತಿಸಿದರು.

ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ ನಂದಿತಾ ಎಮ್ ಎನ್, ಪ್ರಾಸ್ತಾವಿಕ ಮಾತನಾಡಿದರು. ಈ ಸಂಧರ್ಭದಲ್ಲಿ ಮುಖಂಡರಾದ ರವೀಂದ್ರ ಜಾಲ್ದಾರ, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ ಮಹ್ಮದ್ ಶಾಕೀರ್ ಮೋಹಿಯುದ್ದೀನ್, ಪ್ರಭಾರಿ ತಾಲೂಕಾ ಆರೋಗ್ಯಾಧಿಕಾರಿ ಡಾ.ಫರಹಾ ನಸ್ರಿನ್ ಖಾಜಿ, ವೈದ್ಯಾಧಿಕಾರಿ ಡಾ.ಶ್ವೇತಾಂಬರಿ, ಸರಕಾರಿ ಪ್ರಾಥಮಿಕ ಶಾಲೆಯ ಮುಖ್ಯಾಧ್ಯಾಪಕರಾದ ಅನೀತಾ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ದಂತ ತಜ್ಞೆ ಡಾ ಪೌಝಿಯಾ, ಡಮೆನ್ ಸಂಸ್ಥೆಯ ಸುಧಾಕರ, ಬಿಹೆಚ್‌ಇಓ ಸರೋಜಾ. ಕೆ, ಹಿರಿಯ ಹೆಚ್‌ಐಓ ಸುರೇಶ್, ಬಿಬಿ ದೊಡ್ಡಮನಿ, ಹಿರಿಯ ಪ್ರಯೋಗಾಲಯ ತಂತ್ರಜ್ಞೆ ಸಾಯಿರಾಬಾನು, ಹೆಚ್‌ಐಓ ಮಹೇಂದ್ರ, ರಾಜು, ಶ್ರೀಕಾಂತ್, ಎಸ್‌ಟಿಎಸ್ ಅಮೀರ್ ಸೇರಿದಂತೆ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ಶೂಶ್ರೂಷಣಾಧಿಕಾರಿಗಳು, ಆರೋಗ್ಯ ನೀರಿಕ್ಷಣಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿಗಳು, ಜಿಲ್ಲಾ ಕುಷ್ಠರೋಗ, ಕ್ಷಯರೋಗ ವಿಭಾಗದ ಸಿಬ್ಬಂದಿ, ಆಶಾ ಕಾರ್ಯಕರ್ತೆಯರು ಮತ್ತು ತಾಯಂದಿರು ಉಪಸ್ಥಿತರಿದ್ದರು.

# ಪ್ರತಿಯೊಬ್ಬರು ಕೂಡ ಕನ್ನಡ ನಾಡು ನುಡಿ, ಸಂಸ್ಕೃತಿಯ ಬಗ್ಗೆ ಅಭಿಮಾನ ಹೊಂದಿ: ಹಂಪಯ್ಯ ನಾಯಕ



ಯುವ ಮಾರ್ಗ ಸುದ್ದಿ

**ಮಾನ್ವಿ,ನ.3–** ಪಟ್ಟಣದ ನೇತಾಜಿ ಶಿಕ್ಷಣ ಸಂಸ್ಥೆಯ ಪ್ರಾಥಮಿಕ, ಪ್ರೌಢ ಮತ್ತು ಪ.ಪೂ.ಕಾಲೇಜ್ ಆವರಣದಲ್ಲಿ ನಡೆದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮಕ್ಕೆ ಶಾಸಕ ಹಂಪಯ್ಯ ನಾಯಕ ಉದ್ಘಾಟಿಸಿ ಮಾತನಾಡಿ ಪ್ರತಿಯೊಬ್ಬರು ಕೂಡ ಕನ್ನಡ ನಾಡು ನುಡಿ, ಸಂಸ್ಕೃತಿಯ ಬಗ್ಗೆ ಅಪಾರವಾದ ಅಭಿಮಾನವನ್ನು ಹೊಂದಿರಬೇಕು ಆಗ ಮಾತ್ರ ಕರ್ನಾಟಕ ರಾಜ್ಯದ ಸರ್ವತೋಮುಖ ಅಭಿವೃದ್ಧಿ ಸಾಧ್ಯ ಇತ್ತೀಚಿನ ದಿನಗಳಲ್ಲಿ ಪಾಲಕರಿಗೆ ಇಂಗ್ಲೀಷ್ ಭಾಷೆಯ ವ್ಯಾಮೋಹ ಹೆಚ್ಚಾಗಿದೆ. ಅದರೆ ಮಕ್ಕಳ ಕಲಿಕೆಗೆ ಮಾತೃಭಾಷೆ ಕನ್ನಡ ಬಹಳ ಶ್ರೇಷ್ಟವಾಗಿರುತ್ತದೆ ಕನ್ನಡದ ಜೊತೆಗೆ ಇತರ ಭಾಷೆಗಳನ್ನು ಕೂಡ ವ್ಯವಹಾರಕವಾಗಿ ಕಲಿಯೋಣ ಆದರೆ ಮಾತೃ ಭಾಷೆ ಕನ್ನಡ ಕ್ಕೆ ಮೊದಲ ಆದ್ಯತೆ ನಿಡೋಣ ಎಂದು ತಿಳಿಸಿದರು.

ರಾಗ ಕರೋಕೆ ತಂಡದ ಕಲಾವಿದರು ಕನ್ನಡ ಹಾಡಿನ ಮೂಲಕ ವಿದ್ಯಾರ್ಥಿಗಳ ಮನರಂಜಿಸಿದರು ನೇತಾಜಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಕೆ.ಈ.ನರಸಿಂಹ. ರವರು ಶಾಸಕರಿಗೆ ಸ್ಮಾರಣಿಕೆಯನ್ನು ನೀಡಿ ಗೌರವಿಸಿದರು.

ಕಾರ್ಯದರ್ಶಿ ಕೆ.ವಿಜಯಲಕ್ಷ್ಮೀ, ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಅಬ್ದುಲ್ ಗಫೂರ ಸಾಬ್ , ಮುಖಂಡರಾದ ಬಿ.ಕೆ.ಅಮರೇಶಪ್ಪ, ಖಾಲಿದ್ ಖಾದ್ರಿ, ಪಕ್ಷಿ ಪ್ರೇಮಿ ಸಲ್ಲಾವುದ್ದೀನ್, ಕ.ಸಾ.ಪ. ಜಿಲ್ಲಾ ಗೌರವಧ್ಯಕ್ಷರಾದ ತಾಯಪ್ಪ ಹೊಸೂರು ಸಂಸ್ಥೆ ಕಾರ್ಯದರ್ಶಿ ಕೆ. ರವಿವರ್ಮಾ ಸೇರಿದಂತೆ ಉಪನ್ಯಾಸ'ಕರು,ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಇದ್ದರು

# ಗುಂಡೆಪಲ್ಲಿ (ಕೆ): ಕೀಟ, ರೋಗಗಳ ನಿರ್ವಹಣೆ ತರಬೇತಿ



**ಕಲಬುರಗಿ,ನ.3–**ಕೃಷಿ ಮಹಾವಿದ್ಯಾಲಯದ ಅಂತಿಮ ವರ್ಷದ ಬಿಎಸ್ಸಿ (ಕೃಷಿ) ವಿದ್ಯಾರ್ಥಿಗಳಿಂದ ಗ್ರಾಮೀಣ ಕೃಷಿ ಕಾರ್ಯಾನುಭವ ಶಿಬಿರದ ಅಂಗವಾಗಿ ಸೇಡಂ ತಾಲೂಕಿನ ಗುಂಡೆಪಲ್ಲಿ( ಕೆ) ಗ್ರಾಮದಲ್ಲಿ ತೊಗರಿ,ಕಡಲೆ,ಜೋಳ, ಹತ್ತಿ ಮತ್ತು ಕುಸುಬೆ ಬೆಳೆಗಳ ಉತ್ಪಾದನೆ ಕೀಟ ಮತ್ತು ರೋಗಗಳ ಸಮಗ್ರ ನಿರ್ವಹಣೆ ಕುರಿತು ತರಬೇತಿಯನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಅಂತಿಮ ವರ್ಷದ ಬಿಎಸ್ಸಿ (ಕೃಷಿ) ವಿದ್ಯಾರ್ಥಿ ಕುಮಾರಿ ಚೈತ್ರ ತೊಗರಿ ಬೆಳೆಯ ನಿರ್ವಹಣೆ, ಹೂ ಮತ್ತು ಕಾಯಿಗಳ ಉದುರುವಿಕೆ ನಿರ್ವಹಿಸುವ ಕುರಿತು, ತೊಗರಿಯಲ್ಲಿ ಅಧಿಕ ಇಳುವರಿ ಪಡೆಯುವಲ್ಲಿ ಪಲ್ಸ್ ಮ್ಯಾಜಿಕ್ ಬಳಕೆ ಕುರಿತು ಕು ಸಹನಾ, ತೊಗರಿ ,ಜೋಳ, ಕಡಲೆಯಲ್ಲಿ ಕೀಟ ಹಾಗೂ ಅವುಗಳ ಸಮಗ್ರ ನಿರ್ವಹಣೆ ಕುರಿತು ಕುಮಾರಿ ತ್ರಿವೇಣಿ, ಕಡಲೆ ಬೆಳೆಯಲ್ಲಿ ಕುಡಿ ಚೂಟುವಿಕೆ ಹಸಿರು ಕಾಯಿ ಕೊರಕ ಹಾಗೂ ನಟಿ ರೋಗದ ನಿರ್ವಹಣೆ ಕುರಿತು ಮಹೇಶ್ ಗರಸಂಗಿ ತಿಳಿಸಿದರು.

ಕೃಷಿ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕರಾದ ಡಾ.ಗಜೇಂದ್ರ ಸಿವಿ ಅವರು ಅಧಿಕ ಲಾಭಕ್ಕಾಗಿ ಕೃಷಿ ಅರಣ್ಯ ಹಾಗೂ ಅದರ ನಿರ್ವಹಣೆ ಕುರಿತು ತಿಳಿಸಿಕೊಟ್ಟರು. ಗ್ರಾಮದ ಹಿರಿಯರಾದ ನಾಗರೆಡ್ಡಿ ಅಂತರ ಬೆಳೆಯ ಮಹತ್ವ ಮತ್ತು ಗುಣಮಟ್ಟದ ಬೀಜ ಹಾಗೂ ಸಾವಯವ ಕೃಷಿಯ ಪ್ರಾಮುಖ್ಯತೆಯನ್ನು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕೃಷಿ ಮಹಾವಿದ್ಯಾಲಯದ ಪ್ರಾಧ್ಯಾಪಕರಾದ ಡಾ.ಸುನಿಲ್ ಕುಮಾರ್ ಎನ್ ಎಮ್ ವಹಿಸಿಕೊಂಡು ಮಾತನಾಡುತ್ತ, ಕೃಷಿ ಕಾರ್ಯ ಅನುಭವ ಶಿಬಿರವು ವಿದ್ಯಾರ್ಥಿಗಳಲ್ಲಿ ಸೇವೆಯ ಮನೋಭಾವ ಹೆಚ್ಚಿಸುವಲ್ಲಿ ಹಾಗೂ ತಳಮಟ್ಟದಲ್ಲಿ ಕೆಲಸ ಮಾಡುವ ಮನಸ್ಥಿತಿ ದೃಢಗೊಳಿಸಲು ಸಹಕಾರಿಯಾಗಲಿದೆ. ಜೊತೆಗೆ ರೈತರೊಂದಿಗೆ ಬೆರೆತು ಅವರ ಅನುಭವ ಹಾಗೂ ಕ್ಷೇತ್ರ ನಿರ್ವಹಣಾ ಕೌಶಲ್ಯ ಅರಿತುಕೊಳ್ಳಲು ಸಹಕಾರಿ ಯಾಗಲಿದೆ ಎಂದರು ಹಾಗೂ ರೈತರೊಂದಿಗೆ ಸಂವಾದದಲ್ಲಿ ಭಾಗವಹಿಸಿ ರೈತರ ಪ್ರಶ್ನೆಗಳಿಗೆ ಉತ್ತರಿಸಿದರು. ಕುಮಾರಿ ಅನುಷಾ ಎಸ್ ವಿವಿಧ ಬೆಳೆಗಳಲ್ಲಿ ಬೀಜೋಪಚಾರ , ಅದರ ಮಹತ್ವ ಚಿಕ್ಪಿ ಮ್ಯಾಜಿಕ್ ಬಳಕೆಯ ಕುರಿತು ತಿಳಿಸುವುದರಲ್ಲದೆ ಕಾರ್ಯಕ್ರಮದ ಸಂಚಾಲನೆಯನ್ನು ವಹಿಸಿಕೊಂಡರು. ಮಕ್ತುಮ್ ಸಾಬ ವಂದಿಸಿದರು. ಈ ಕಾರ್ಯಕ್ರಮದಲ್ಲಿ ಗ್ರಾಮದ ಹಿರಿಯರಾದ ರಘುನಾಥ್ ರೆಡ್ಡಿ, ಬಿಚಾ ರೆಡ್ಡಿ, ಅನಂತ ರೆಡ್ಡಿ, ಮಧುಸೂದನ್ ರೆಡ್ಡಿ, ಮುಲುಗಪ್ಪ , ನರಸ ರೆಡ್ಡಿ ಪಾಟೀಲ್, ಕೃಷ್ಣಪ್ಪ, ಶ್ರೀರಾಮಚಂದ್ರ ಮತ್ತು ನಾಗರೆಡ್ಡಿ ಆದಿಯಾಗಿ ಗ್ರಾಮ ಹಾಗೂ ಸುತ್ತಮುತ್ತಲಿನ ಗ್ರಾಮದ ಸುಮಾರು 135ಕ್ಕೂ ಅಧಿಕ ಜನರು ಭಾಗವಹಿಸಿ ಮಾಹಿತಿಯನ್ನು ಪಡೆದುಕೊಂಡರು.

ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಗೆ

# ಅರ್ಹ ಶಿಕ್ಷಕರೆಲ್ಲರೂ ನೋಂದಣಿ ಮಾಡಿಸಿ: ಡಿಡಿಪಿಐ ಕೆ.ಡಿ.ಬಡಿಗೇರ್ ಸಲಹೆ



ಯುವ ಮಾರ್ಗ ಸುದ್ದಿ

**ರಾಯಚೂರು,ನ.3–**ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಗೆ ಅರ್ಹ ಶಿಕ್ಷಕರೆಲ್ಲರೂ ನೋಂದಣಿ ಮಾಡಿಸಬೇಕು ಎಂದು ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕೆ.ಡಿ.ಬಡಿಗೇರ್ ಅವರು ಹೇಳಿದರು.

ನವೆಂಬರ್ 03ರ ಸೋಮವಾರ ದಂದು ನಗರದ ಬೆಸ್ಟ್ ಪಿಯು ಕಾಲೇಜಿನ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ಶಾಲಾ ಶಿಕ್ಷಣ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ ಹಾಗೂ ಸ್ವೀಪ್ ಸಮಿತಿ ಇವರ ಸಂಯುಕ್ತಾಶ್ರಯದಲ್ಲಿ ನಡೆದ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ– 2026ರ ಮತದಾರರ ವಿಶೇಷ ಮಿಂಚಿನ ನೋಂದಣಿ ಮೂರನೇ ಅಭಿಯಾನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮತದಾರರ ಪಟ್ಟಿಗೆ ಸೇರ್ಪಡೆಗೆ ಅರ್ಹತೆ ಪಡೆದ ಯಾರು ಸಹ ಮತದಾರರ ಪಟ್ಟಿಯಿಂದ ಹೊರಗುಳಿಯಬಾರದು. ಅದಕ್ಕಾಗಿ ನಮೂನೆ 19ನ್ನು ಭರ್ತಿ ಮಾಡಿ ಸಲ್ಲಿಸಬೇಕು ಎಂದು ಹೇಳಿದರು. ಕರ್ನಾಟಕ ಈಶಾನ್ಯ ಕ್ಷೇತ್ರದ ಮತದಾರರ ಪಟ್ಟಿ ತಯಾರಿಗೆ ಎಲ್ಲರೂ ಸಹಕಾರ ನೀಡಿ ನಿರ್ದಿಷ್ಟ ಪಡಿಸಿದ ಕಾಲಮಿತಿಯಲ್ಲಿ ಶೇಕಡ 100ರಷ್ಟು ಗುರಿ ತಲುಪಲು ಹೆಸರು ನೋಂದಣಿಗೆ ಸಹಕಾರ ನೀಡಬೇಕು ಎಂದರು.

ಈ ವೇಳೆ ಮತದಾರ ಸಾಕ್ಷರತಾ ಕ್ಲಬನ ನೋಡಲ್ ಅಧಿಕಾರಿ ಡಾ.ದಂಡಪ್ಪ ಬಿರಾದಾರ್ ಅವರು ಮಾತನಾಡಿ, ಶೈಕ್ಷಣಿಕ ಸಂಸ್ಥೆಗಳಲ್ಲಿ 2025 ನವೆಂಬರ 1ಕ್ಕೆ ಆರು ವರ್ಷ ಅವಧಿಯಲ್ಲಿ ಒಟ್ಟು ಕನಿಷ್ಠ ಮೂರು ವರ್ಷ ಬೋಧನಾ ವೃತ್ತಿಯಲ್ಲಿ ನಿರತರಾಗಿರಬೇಕು. ಈ ಬಗ್ಗೆ ಆಯಾ ಶೈಕ್ಷಣಿಕ ಸಂಸ್ಥೆಗಳಿಂದ ಅನುಬಂಧ–2ರಲ್ಲಿ ಪ್ರಮಾಣ ಪತ್ರ ಸಲ್ಲಿಸಬೇಕು. ಸಂಸ್ಥೆಯ ಮುಖ್ಯಸ್ಥರಿಂದ ದೃಢೀಕರಣ ಪತ್ರ ಸಲ್ಲಿಸಬೇಕು ಎಂದರು.

ಇದೇ ಸಂದರ್ಭದಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಸೋಮಶೇಖರಪ್ಪ ಹೋಕ್ರಾಣಿ, ದೈಹಿಕ ಶಿಕ್ಷಣ ವಿಭಾಗದ ಅಧಿಕಾರಿ ರಂಗಸ್ವಾಮಿ, ಬೇಸ್ಟ್ ಪಿಯು ಕಾಲೇಜಿನ ಪ್ರಾಂಶುಪಾಲರಾದ ಶೇಕ್ ಮುಸ್ಕಾನ್, ಮಾನವಿ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಡಾ.ಕುಂಟೆಪ್ಪ, ರವೀಂದ್ರ ಹಾಗೂ ಇತರರು ಇದ್ದರು. ಶರಣಬಸವ ನಿರೂಪಿಸಿದರು.

# ಚಾಂಗಲೇರ ವೀರಭದ್ರೇಶ್ವರ ದೇವಸ್ಥಾನದಲ್ಲಿ ನೂತನವಾಗಿ ನಿರ್ಮಿಸಿರುವ ಪವಿತ್ರ ಸ್ನಾನ ಕುಂಡಕ್ಕೆ ಚಾಲನೆ

**ಬೀದರ್ ,ನ.3–**ದಕ್ಷಿಣ ಕ್ಷೇತ್ರದ ಸುಪ್ರಸಿದ್ಧ ಚಾಂಗಲೇರ ವೀರಭದ್ರೇಶ್ವರ ದೇವಸ್ಥಾನದಲ್ಲಿ ನೂತನವಾಗಿ ನಿರ್ಮಿಸಿರುವ ಪವಿತ್ರ ಸ್ನಾನ ಕುಂಡಕ್ಕೆ ವಿಶೇಷ ಪೂಜೆ ಸಲ್ಲಿಸಿ ಪುಸ್ಪ ನಮನ ಸಲ್ಲಿಸಿ ಚಿಟಗುಪ್ಪ ಅಯ್ಯಪ್ಪಸ್ವಾಮಿ ಹಿರೇಮಠದ ಗುರುಲಿಂಗ ಶಿವಾಚಾರ್ಯರು, ಮರುಳಾರಾಧ್ಯ ಶಿವಾಚಾರ್ಯರ ನೇತೃತ್ವದಲ್ಲಿ ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರು ಚಾಲನೆ ನೀಡಿದರು.



ಚಾಂಗಲೇರಾದಲ್ಲಿ ಬೇಡಿ ಬರುವ ಭಕ್ತಾದಿಗಳ ಕಷ್ಟಗಳನ್ನು ಪರಿಹರಿಸಿ ಇಷ್ಟಾರ್ಥಗಳನ್ನು ನೀಡಿ ಹರಸುವ ಜಾಗೃತ ಪೀಠವಾಗಿದೆ. ಕೋಟ್ಯಂತರ ಭಕ್ತರ ಆರಾಧ್ಯ ದೈವವಾಗಿರುವ ವೀರಭದ್ರೇಶ್ವರ ಜಾತ್ರಾ ಮಹೋತ್ಸವಕ್ಕೆ ಬರುವ ಭಕ್ತಾದಿಗಳಿಗೆ ಮೂಲ ಸೌಕರ್ಯ ಕಲ್ಪಿಸಲು ನಾವೆಲ್ಲರೂ ಹಗಲಿರುಳು ಶ್ರಮಿಸುವುದು ನಮ್ಮೆಲ್ಲರ ಕರ್ತವ್ಯ ವೀರಭದ್ರೇಶ್ವರರ ಭಕ್ತರಾದ ಉಧ್ಯಮಿ ವೀರಶೆಟ್ಟಿ ಪಾಟೀಲ್ ಅವರು ಪವಿತ್ರ ಸ್ನಾನ ಕುಂಡ ಬಹಳ ಉತ್ತಮವಾಗಿ ಸುಸಜ್ಜಿತವಾಗಿ ನಿರ್ಮಾಣ ಮಾಡಿಸಿದ್ದಾರೆ ದೇವಸ್ಥಾನಕ್ಕೆ ಬರುವ ಭಕ್ತರು ಸಹ ಸ್ನಾನ ಕುಂಡದಲ್ಲಿ ಸ್ವಚ್ಛತೆ ಕಾಪಾಡುವ ಮೂಲಕ ಪವಿತ್ರ ಸ್ನಾನ ಕುಂಡ ಬಳಸಿ ದೇವರ ದರ್ಶನ ಪಡೆಯಬೇಕು.

ಚಾಂಗಲೇರಾ ವೀರಭದ್ರೇಶ್ವರ ಜಾತ್ರೆ ನವೆಂಬರ್ 3 ರಿಂದ ಪ್ರಾರಂಭವಾಗಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ನಡೆಯಲಿದ್ದು. ಈ ಜಾತ್ರೆಯಲ್ಲಿ ನವೆಂಬರ್ 5 ರಂದು ಬೆಳಿಗ್ಗೆ ಅಗ್ನಿ ತುಳಿಯುವ ಕಾರ್ಯಕ್ರಮ, ಸಂಜೆ ಅದ್ದೂರಿ ರಥೋತ್ಸವ ನಡೆಯಲಿದೆ. ವೀರಗಾಸಿ, ಡೊಳ್ಳು ಕುಣಿತ, ಮುಂತಾದ ಸಾಂಸ್ಕೃತಿಕ ಕಾರ್ಯಕ್ರಮಗಳು ಮೆರವಣಿಗೆಯ ಭಾಗವಾಗಿದ್ದು, ಮಹಾರಾಷ್ಟ್ರ, ತೆಲಂಗಾಣ, ಆಂಧ್ರಪ್ರದೇಶ ಮತ್ತು ಕರ್ನಾಟಕದ ವಿವಿಧ ಜಿಲ್ಲೆಗಳಿಂದ ಸಾವಿರಾರು ಭಕ್ತರು ಭಾಗವಹಿಸುತ್ತಾರೆ.

ಜಾತ್ರೆಯ ಪ್ರಮುಖ ಕಾರ್ಯಕ್ರಮಗಳು ನ. 3 ರಂದು ಜಾತ್ರಾ ಮಹೋತ್ಸವ ಪ್ರಾರಂಭ, ಧಾರ್ಮಿಕ ವಿಧಿವಿಧಾನಗಳೊಂದಿಗೆ ಪೂಜೆ, ದೇವಾಲಯದ ಪಲ್ಲಕ್ಕಿ ಉತ್ಸವ ನಡೆಯಲಿದೆ. ನ. 5 ಬೆಳಗ್ಗೆ ವೀರಭದ್ರೇಶ್ವರ ದೇವರ ಉತ್ಸವ ಮೂರ್ತಿಯ ಭವ್ಯ ಮೆರವಣಿಗೆ ಮತ್ತು ರಥೋತ್ಸವ. ರಾತ್ರಿ ರಥೋತ್ಸವದ ನಂತರ ಗೀಗೀ ಪದದಂತಹ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ನ. 6 ಜಂಗೀ ಕುಸ್ತಿ ಮತ್ತು ಇತರ ಸ್ಪರ್ಧೆಗಳು ನಡೆಯಲಿವೆ ಕಳೆದ ಬಾರಿ ಜೋಕಾಲಿಯಲ್ಲಿ ಅವಘಡ ಸಂಭವಿಸಿದೆ ಈ ನಿಮಿತ್ತ ಪಾಲಕರು ಮಕ್ಕಳಿಗೆ ಒಂಟಿಯಾಗಿ ಆಟವಾಡಲು ಬಿಡಬೇಡಿ ತೀವ್ರ ನಿಗಾ ವಹಿಸಬೇಕು ಎಂದು ಸಲಹೆ ನೀಡಿದರು.

# ಯುವತಿ ಜೊತೆ ಸಂಬಂಧ: ಯುವಕನ ಕೊಲೆ

**ಕಲಬುರಗಿ,ನ.3–**ತಲೆ ಮೇಲೆ ಕಲ್ಲು ಎತ್ತಿ ಹಾಕಿ ಯುವಕನ ಕೊಲೆ ಮಾಡಿರುವ ಘಟನೆ ಇಲ್ಲಿನ ವಿಜಯನಗರದಲ್ಲಿ ನಡೆದಿದೆ.

ರಿತೇಶ್ ತಂದೆ ಧೂಳಪ್ಪ (30) ಕೊಲೆಯಾದ ಯುವಕ.ಬೆಂಗಳೂರಿನ ಬಂಡೆ ಬೊಮ್ಮಸಂದ್ರದಲ್ಲಿ ತಾಯಿಯೊಂದಿಗೆ ವಾಸವಾಗಿದ್ದ ರಿತೇಶ್ ಎರಡು ದಿನಗಳ ಹಿಂದೆಯಷ್ಟೇ ಕಲಬುರಗಿಗೆ ಬಂದಿದ್ದ ಎನ್ನಲಾಗಿದೆ.ಯುವತಿ ಜೊತೆಗಿನ ಸ್ನೇಹ, ಸಂಬಂಧವೇ ಕೊಲೆಗೆ ಕಾರಣವೆನ್ನಲಾಗಿದೆ.

ಸಚಿನ್ ಎಂಬಾತನ ಸಹೋದರಿ ಜೊತೆ ರಿತೇಶ್ ಸಂಬಂಧವಿರಿಸಿಕೊಂಡಿದ್ದ ಎನ್ನಲಾಗಿದ್ದು, ಈ ಹಿನ್ನೆಲೆಯಲ್ಲಿ ಸಚಿನ್ ಮತ್ತು ಶ್ರೀಕಾಂತ್ ಎಂಬುವವರು ಸೇರಿ ರಿತೇಶ್ ಕೊಲೆ ಮಾಡಿದ್ದಾರೆ ಎಂದು ರಿತೇಶ್ ಸಹೋದರಿ ಆರ್.ಜಿ.ನಗರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ. ಆರೋಪಿಗಳನ್ನು ವಶಕ್ಕೆ ಪಡೆಯಲಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.



# ನೃಪತುಂಗ ಅಧ್ಯಯನ ಸಂಸ್ಥೆಗೆ ಜಗದೀಶ್ ಕಡಬಗಾಂವ ನೂತನ ಅಧ್ಯಕ್ಷರಾಗಿ ಆಯ್ಕೆ

**ಸೇಡಂ ,ನ ,03–** ಕನ್ನಡ ಭಾಷೆ ಮತ್ತು ಸಾಹಿತ್ಯದ ಅಭಿವೃದ್ಧಿಗೆ ಪ್ರೋತ್ಸಾಹ ಹಾಗೂ ಸಂರಕ್ಷಣೆಯ ಜೊತೆಗೆ ಸಾಹಿತ್ಯ ಸಂಶೋಧನೆ, ಪ್ರಕಟಣೆಗಳು, ದತ್ತಿ ಉಪನ್ಯಾಸಗಳು ಮತ್ತು ಚರ್ಚಾ ವೇದಿಕೆಗಳಿಗೆ ಆಸರೆಗಾಗಿ 43 ವರ್ಷಗಳ ಹಿಂದೆ ಸ್ಥಾಪನೆಯಾದ ನೃಪತುಂಗ ಅಧ್ಯಯನ ಸಂಸ್ಥೆಗೆ ನಿವೃತ್ತ ಕನ್ನಡ ಉಪನ್ಯಾಸಕರು ಮತ್ತು ಸಾಹಿತ್ತಿಕ ಚಟುವಟಿಕೆಗಳಲ್ಲಿ ಸದಾ ಕ್ರಿಯಾಶೀಲರಾದ ಜಗದೀಶ್ ಕಡಬಗಾಂವ ಅವರು ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ.



ಶ್ರೀ ಕೊತ್ತಲ ಬಸವ ಸಭಾ ಭವನದಲ್ಲಿ ಆಯೋಜಿಸಿದ ಕೃತಿ ಬಿಡುಗಡೆ ಮತ್ತು ಕವಿಗೋಷ್ಠಿ ಸಮಾರಂಭದಲ್ಲಿ ನೃಪತುಂಗ ಅಧ್ಯಯನ ಸಂಸ್ಥೆಯ ಅಧ್ಯಕ್ಷರಾದ ಪ್ರಭಾಕರ ಜೋಶಿಯವರು ತಮ್ಮ ಅಧ್ಯಕ್ಷೀಯ ಅಧಿಕಾರವನ್ನು ಶ್ರೀ ಜಗದೀಶ್ ಕಡಬಗಾಂವ್ ಅವರಿಗೆ ಹಸ್ತಾಂತರಿಸಿದರು.ಸಮಾರಂಭದಲ್ಲಿ ಹಿರಿಯ ಸಾಹಿತಿಗಳಾದ ಶ್ರೀ ಮಹಿಪಾಲರೆಡ್ಡಿ ಮುನ್ನೂರು, ಸಂಯುಕ್ತ ಕರ್ನಾಟಕ ದಿನಪತ್ರಿಕೆಯ ಸ್ಥಾನಿಕ ಸಂಪಾದಕರು ಹಾಗೂ ಸಾಹಿತಿಗಳಾದ ಶ್ರೀ ಪ್ರಭಾಕರ್ ಜೋಶಿ, ಆಕಾಶವಾಣಿ ಕಲಬುರ್ಗಿ ಕೇಂದ್ರದ ಅಧಿಕಾರಿಗಳಾದ ಶ್ರೀ ಸದಾನಂದ ಪೆರ್ಲ, ಸಾಹಿತಿ ಶ್ರೀ ಮಹಾಂತೇಶ ನವಲಕಲ್, ಕೆರಳ್ಳಿ ಗುರುನಾಥ್ ರೆಡ್ಡಿ ಪ್ರತಿಷ್ಠಾನದ ಅಧ್ಯಕ್ಷರಾದ ಶ್ರೀ ಸಿದ್ದಪ್ಪ ತಳ್ಳಳ್ಳಿ, ಶ್ರೀ ಕೊತ್ತಲ ಬಸವೇಶ್ವರ ದೇವಾಲಯದ ಪೂಜ್ಯರಾದ ಡಾ. ಸದಾಶಿವ ಸ್ವಾಮೀಜಿ ಹಾಗೂ ಸೇಡಂ ಪಟ್ಟಣದ ಹಿರಿಯ ಮತ್ತು ಯುವ ಸಾಹಿತಿಗಳು ಉಪಸ್ಥಿತರಿದ್ದರು.

# ಕನ್ನಡ ನಾಡು-ನುಡಿಗಾಗಿ ಶ್ರಮಿಸಿ : ಯಲಗೋಡ



**ಜೇವರ್ಗಿ:ನ.3–** 'ಸಂಕುಚಿತ ಮನೋಭಾವ ತೊರೆದು ಕನ್ನಡ ನಾಡು, ನುಡಿಗಾಗಿ ಪ್ರತಿಯೊಬ್ಬರೂ ಶ್ರಮಿಸಬೇಕು' ಎಂದು ತಹಶೀಲ್ದಾರ್ ಮಲ್ಲಣ್ಣ ಯಲಗೋಡ ಹೇಳಿದರು.

ಪಟ್ಟಣದ ಟೌನ್‌ಹಾಲ್‌ನಲ್ಲಿ ಶನಿವಾರ ತಾಲ್ಲೂಕಾಡಳಿತದ ವತಿಯಿಂದ ಆಯೋಜಿಸಲಾಗಿದ್ದ ಕನ್ನಡ ರಾಜ್ಯೋತ್ಸವ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. 'ಬೇರೆ ದೇಶ ಮತ್ತು ರಾಜ್ಯದ ಜನರು ಅವರವರ ಭಾಷೆಯನ್ನು ಮಾತನಾಡುವುದರ ಮೂಲಕ ಭಾಷಾಭಿಮಾನ ಬೆಳೆಸಿಕೊಂಡಿದ್ದಾ-ರೆ. ಅದೇ ರೀತಿ ಕನ್ನಡಿಗರು ಕನ್ನಡದ ಭಾಷಾಭಿಮಾನವನ್ನು ಬೆಳೆಸಿಕೊಂಡು ಕನ್ನಡವನ್ನು ಎಲ್ಲೆಡೆ ಬಳಸಬೇಕು' ಎಂದರು.

ಉಪನ್ಯಾಸ ನೀಡಿದ ಬಿಆರ್‌ಸಿ ಗುರುಶಾಂತಪ್ಪ ಚಿಂಚೋಳಿ, 'ಎಲ್ಲಾ ಧರ್ಮ, ಜಾತಿಯವರು ಒಂದಾಗಿ ಕನ್ನಡದ ಕಂಪನ್ನು ಎಲ್ಲೆಡೆ ಪಸರಿಸು.ಜೇವರ್ಗಿಯ ಟೌನ್‌ಹಾಲ್‌ನಲ್ಲಿ ಆಯೋಜಿಸಲಾಗಿದ್ದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ತಹಶೀಲ್ದಾರ್ ಮಲ್ಲಣ್ಣ ಯಲಗೋಡ ಉದ್ಘಾಟಿಸಿದರು

ವಂತಾಗಬೇಕು. ತಮಿಳುನಾಡು, ಕೇರಳ ರಾಜ್ಯಕ್ಕೆ ನಾವು ತೆರಳಿದಾಗ ಅವರು ಅಲ್ಲಿನ ಮಾತೃಭಾಷೆಯಲ್ಲಿ ಮಾತನಾ-ಡಿಸುತ್ತಾರೆ. ಕನ್ನಡ ಭಾಷೆ ಬೆಳವಣಿಗೆಗೆ ಇಲ್ಲಿ ನೆಲೆಸಿರುವ ಎಲ್ಲ ಭಾಷಿಕರು ಕೈ ಜೋಡಿಸಬೇಕು. ಅತಿಯಾದ ಇಂಗ್ಲಿಷ್ ವ್ಯಾಮೋಹ ಕನ್ನಡ ಭಾಷೆ ಬೆಳವಣಿಗೆಗೆ ಅಡ್ಡಿಯಾಗುತ್ತಿದೆ' ಎಂದು ಕಳವಳ ವ್ಯಕ್ತ-ಪಡಿಸಿದರು.

ಕಸಾಪ ಅಧ್ಯಕ್ಷ ಎಸ್.ಕೆ.ಬಿರಾದಾರ, ಪುರಸಭೆ ಮುಖ್ಯಾಧಿಕಾರಿ ಶಂಭುಲಿಂಗ ದೇಸಾಯಿ, ತಾ.ಪಂ. ಇಒ ರವಿಚಂ-ದ್ರರೆಡ್ಡಿ, ಎಪಿಎಂಸಿ ಕಾರ್ಯದರ್ಶಿ ಸುಮಂಗಲಾದೇವಿ ಹೂಗಾರ, ಸಮಾಜ ಕಲ್ಯಾಣ ಇಲಾಖೆಯ ಸತೀಶಕುಮಾರ ಸಂಗನ, ಜೆಸ್ಕಾಂ ಎಇಇ ರಾಜೇಂದ್ರ ಕಟ್ಟಿಮನಿ, ಲೋಕೋಪಯೋಗಿ ಇಲಾಖೆಯ ತಜಮುಲ್ಲಾ ಹುಸೇನ್,ಅರಣ್ಯ ಇಲಾಖೆಯ ಸಂತೋಷ ಯಚೆ, ಪಶು ಇಲಾಖೆಯ ಶೋಭಾ ಸಜ್ಜನ, ಬಿಇಒ ವೀರಣ್ಣ ಬೊಮ್ಮನಹಳ್ಳಿ, ಟಿಎಚ್‌ಒ ಡಾ.ಉಮೇಶ ಶರ್ಮಾ, ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಗುರುಶಾಂತಯ್ಯ ಗದ್ದಗಿಮಠ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ಕನ್ನಡಪರ ಸಂಘಟನೆಯ ಮುಖಂಡರಾದ ಕ ರ ವೇ ತಾಲೂಕು ಪ್ರ ಕಾ ಬಿ ಎಚ್ ಮಾಲಿ ಪಾಟೀಲ್ ಸೋಮನಾಥಹಳ್ಳಿ ಜೈ ಕ ರ ವೇ ತಾಲೂಕು ಅಧ್ಯಕ್ಷ ಶರಬು ಕಲ್ಯಾಣಿ ವಿಷ್ಣು ಸೇನಾ ಅಧ್ಯಕ್ಷ ಬಸವರಾಜ ಬಾಗೇವಾಡಿ ಕ ಸಾ ಪ ತಾಲೂಕು ಗೌರವ ಕಾ ಶ್ರೀಹರಿ ಕರಕಿಹಳ್ಳಿ ನಗರ ಘಂಟಕ ಅಧ್ಯಕ್ಷ ಬಂಗಾರೆಪ್ಪ ಆಡಿನ ಸಿದ್ದು ಕೆರೂರ್ ಚಂದ್ರಶೇಖರ್ ಗೌಡ ಪಾಟೀಲ್ ಜಿಲ್ಲಾ ಜಾಗೃತಿ ಸಮಿತಿ ಸದಸ್ಯರಾ ದ ಕಾಸಿನಾಥ ಮಂದೇವಾಲ ಬ ಸಣ್ಣ ಸರ್ಕಾರ ಸಿದ್ದರಾಮ ಕಟ್ಟಿ ಪ್ರಗತಿಪರ ಚಿಂತಕ ಭಗವಂತ ರಾಯ ಬೆಣ್ಣೂರ ಮಾಳಪ್ಪ ಪೂಜಾರಿ ಚಿಗರಹಳ್ಳಿ ಎಸ್ ಟಿ ಬಿರೇದಾರ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಇದಕ್ಕೂ ಮುನ್ನ ತಹಶೀಲ್ದಾರ್ ಮಲ್ಲಣ್ಣ ಯಲಗೋಡ ಮಿನಿವಿಧಾನಸೌಧ ಕಚೇರಿ ಆವರಣದಲ್ಲಿ ಭುವನೇಶ್ವರಿ ತಾಯಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಧ್ವಜಾರೋಹಣ ನೆರವೇರಿಸಿದರು. ನಂತರ ತಹಶೀಲ್ದಾರ್ ಕಚೇರಿಯಿಂದ ಬಸವೇಶ್ವರ ಸರ್ಕಲ್, ಅಂಬೇಡ್ಕರ್ ಸರ್ಕಲ್, ಅಖಂಡೇಶ್ವರ ಸರ್ಕಲ್ ಮೂಲಕ ಟೌನ ಹಾಲ್‌ವರೆಗೆ ಅದ್ದೂರಿ ಭಾವಚಿತ್ರದ ಮೆರವಣಿಗೆ ನಡೆಸಲಾಯಿತು. ಮೆರವಣಿಗೆಯಲ್ಲಿ ಲೇಜಿಮ್, ಕೋಲಾಟ, ಹಲಗೆ, ಡೊಳ್ಳು ಸೇರಿದಂತೆ ಹಲವಾರು ಕಲಾ ತಂಡಗಳು ಭಾಗವಹಿಸಿದ್ದವು.

# "ಖರ್ಗೆ ಅವರು ಯಾವತ್ತಾದರೂ ಸಮಾಜಘಾತುಕ PFI, SDPI ಸಂಘಟನೆಗಳನ್ನು ನಿಷೇಧಿಸುವಂತೆ ಕೇಳಿದ್ದಾರೆಯೇ?"



**ಬೆಂಗಳೂರು,ನ.3–** ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಪಿಎಫ್‌ಐ ಮತ್ತು ಎಸ್‌ಡಿಪಿಐಯಂತಹ ಸಮಾಜಘಾತುಕ ಸಂಘಟನೆಗಳನ್ನು ನಿಷೇಧಿಸುವಂತೆ ಎಂದಾದರೂ ಕೇಳಿದ್ದಾರೆಯೇ? ಎಂದು ವಿಧಾನ ಪರಿಷತ್ ಮುಖ್ಯ ಸಚೇತಕ ಎನ್.ರವಿಕುಮಾರ್ ಪ್ರಶ್ನಿಸಿದ್ದಾರೆ.

ರಾಷ್ಟ್ರಿಯ ಸ್ವಯಂ ಸೇವಕ ಸಂಘ(ಆರ್‌ಎಸ್‌ಎಸ್)ವನ್ನು ನಿಷೇಧಿಸಬೇಕೆಂಬ ಮಲ್ಲಿಕಾರ್ಜುನ ಖರ್ಗೆ ಅವರ ಅಸಂಬದ್ಧ ಹೇಳಿಕೆ ತೀವ್ರ ಖಂಡನೀಯ. ಪಿಎಫ್‌ಐ ಮತ್ತು ಎಸ್‌ಡಿಪಿಐಯಂತಹ ಸಮಾಜಘಾತುಕ ಸಂಘಟನೆಗಳನ್ನು ನಿಷೇಧಿಸುವಂತೆ ಎಂದಾದರೂ ಅವರು ಕೇಳಿದ್ದಾರೆಯೇ? ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕಾಂಗ್ರೆಸ್ ಪಕ್ಷವು ರಾಜ್ಯದಲ್ಲಿ ಪಿಎಫ್‌ಐ ಮತ್ತು ಎಸ್‌ಡಿಪಿಐ ಕಾರ್ಯಕರ್ತರ ವಿರುದ್ಧ ದಾಖಲಾಗಿದ್ದ ನೂರಾರು ಪ್ರಕರಣಗಳನ್ನು ಹಿಂತೆಗೆದುಕೊಂಡಿದೆ. ಕರಾವಳಿ ಕರ್ನಾಟಕ ಮತ್ತು ಕೇರಳ ಎರಡರಲ್ಲೂ ನೂರಾರು ಹಿಂದೂ ಕಾರ್ಯಕರ್ತರನ್ನು ಹತ್ಯೆ ಮಾಡಿದ್ದರಲ್ಲಿ ಪಿಎಫ್‌ಐ ಕೈವಾಡವಿದೆ ಎಂಬ ಆರೋಪವಿದೆ.


ಪಿಎಫ್‌ಐ ಮತ್ತು ಎಸ್‌ಡಿಪಿಐ ವಿಷಯ ಬಂದಾಗ, ಖರ್ಗೆ ಅವರಿಂದ ಹಿಡಿದು ಕೆಳಹಂತದವರೆಗಿನ ಕಾಂಗ್ರೆಸಿಗರು ಹಿಂದೆ ಸರಿಯುತ್ತಾರೆ ಯಾಕೆ? ಎಂದು ಪ್ರಶ್ನೆ ಮಾಡಿದ್ದಾರೆ. ಕೆಲ ವರ್ಷಗಳ ಹಿಂದೆ ಬೆಂಗಳೂರಿನ ಡಿ.ಜೆ.ಹಳ್ಳಿ ಮತ್ತು ಕೆ.ಜಿ.ಹಳ್ಳಿಯಲ್ಲಿನ ಪೊಲೀಸ್ ಠಾಣೆ ಮತ್ತು ಪೊಲೀಸ್ ವಾಹನಗಳಿಗೆ ಬೆಂಕಿ ಹಚ್ಚಿದ ಕೃತ್ಯದಲ್ಲಿ ಭಾಗಿಯಾಗಿದ್ದ ಮುಸ್ಲಿಂ ಸಮಾಜಘಾತುಕ ಶಕ್ತಿಗಳ ವಿರುದ್ಧ ದಾಖಲಾದ ಪ್ರಕರಣಗಳನ್ನು ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಹಿಂತೆಗೆದುಕೊಂಡಿರುವುದನ್ನು ಇಡೀ ಜಗತ್ತು ಕಂಡಿದೆ. ಈ ಕಾಂಗ್ರೆಸ್ ಸರ್ಕಾರ ಸ್ಪಷ್ಟವಾಗಿ ಅಲ್ಪಸಂಖ್ಯಾತರ ಓಲೈಕೆ ರಾಜಕಾರಣವನ್ನು ಖಂಡಿಸುವ ಧೈರ್ಯ ಮಲ್ಲಿಕಾರ್ಜುನ ಖರ್ಗೆ ಅವರಿಗಿದೆಯೇ? ಎಂದು ತರಾಟೆ ತೆಗೆದುಕೊಂಡಿದ್ದಾರೆ.

ಕಳೆದ 100 ವರ್ಷಗಳಿಂದ ರಾಷ್ಟ್ರಿಯ ಏಕತೆ, ಸಮಗ್ರತೆ, ಸಾಂಸ್ಕೃತಿಕ ಪುನರುಜ್ಜಿ?ವನ, ಸಮಾಜಸೇವೆ ಮತ್ತು ಸಾಮಾಜಿಕ ಸೌಹಾರ್ದಕ್ಕಾಗಿ ಕೆಲಸ ಮಾಡುತ್ತಿರುವ ಆರ್‌ಎಸ್‌ಎಸ್ ಅನ್ನು ನಿಷೇಧಿಸುವಂತೆ ಖರ್ಗೆ ಆಗ್ರಹ ಕೇವಲ ವಿಪರ್ಯಾಸ ಮಾತ್ರವಲ್ಲ, ಇದು ಸತ್ಯದ ತಿರುಚುವಿಕೆಯೂ ಆಗಿದೆ. ಆರ್‌ಎಸ್‌ಎಸ್ ಇಡೀ ದೇಶದ ಜನರಿಂದ ಗೌರವ, ವಿಶ್ವಾಸಾರ್ಹತೆ ಮತ್ತು ಸ್ವಿಕಾರಾರ್ಹತೆಯನ್ನು ಗಳಿಸಿದೆ. ಜನರ ಬೆಂಬಲವಿಲ್ಲದೆ ಆರ್‌ಎಸ್‌ಎಸ್ ಹೇಗೆ ಆಲದ ಮರದಂತೆ ಬೆಳೆಯಲು ಸಾಧ್ಯ ಎಂದು ಗುಡುಗಿದ್ದಾರೆ.

ಕಾಂಗ್ರೆಸ್ ಹಿಂದೆಯೂ ಮೂರು ಬಾರಿ ಆರ್‌ಎಸ್‌ಎಸ್ ಅನ್ನು ನಿಷೇಧಿಸಲು ಪ್ರಯತ್ನಿಸಿತ್ತು ಎಂಬುದನ್ನು ಖರ್ಗೆ ಅರ್ಥಮಾಡಿಕೊಳ್ಳಬೇಕು. ಸರ್ದಾರ್ ವಲ್ಲಭಭಾಯಿ ಪಟೇಲ್ ಸೇರಿದಂತೆ ಅದೇ ಕಾಂಗ್ರೆಸ್ ಸರ್ಕಾರವು ನಿಷೇಧವನ್ನು ಬೇಷರತ್ತಾಗಿ ತೆರವುಗೊಳಿಸಬೇಕಾಯಿತು ಎಂದು ರವಿಕುಮಾರ್ ಪತ್ರಿಕಾ ಪ್ರಕಟಣೆಯಲ್ಲಿ ಹೇಳಿದ್ದಾರೆ.

# ತೆಲಂಗಾಣದಲ್ಲಿ ಬಸ್-ಟ್ರಕ್ ನಡುವೆ ಭೀಕರ ರಸ್ತೆ ಅಪಘಾತ, 20 ಮಂದಿ ಸಾವು

**ರಂಗಾ ರೆಡ್ಡಿ ,ನ.3–** ಜಲ್ಲಿಕಲ್ಲು ಸಾಗಿಸುತ್ತಿದ್ದ ಟಿಪ್ಪರ್ ಲಾರಿಯೊಂದು ಸಾರಿಗೆ ಬಸ್ ಡಿಕ್ಕಿ ಹೊಡೆದ ಪರಿಣಾಮ ಅದರಲ್ಲಿದ್ದ 20 ಜನರು ಸಾವನ್ನಪ್ಪಿರುವ ಘಟನೆ ಇಂದು ಬೆಳಿಗ್ಗೆ ತೆಲಂಗಾಣಾದ ರಂಗಾ ರೆಡ್ಡಿ ಜಿಲ್ಲೆಯ ಚೆವೆಲ್ಲಾ ಬಳಿ ನಡೆದಿದೆ.





ಟಿಪ್ಪರ್ ತೆಲಂಗಾಣ ರಸ್ತೆ ಸಾರಿಗೆ ನಿಗಮ (ಆರ್‌ಟಿಸಿ) ವಾಹನಕ್ಕೆ ಡಿಕ್ಕಿ ಹೊಡೆದ ಡಿಕ್ಕಿ ರಭಸಕ್ಕೆ ಬಸ್ ಬಸ್ ಒಳಗೆ ಜಲ್ಲಿಕಲ್ಲು ಬಿದ್ದಿದ್ದು ಸ್ಥಳದಲ್ಲೆ 16 ಜನರು ಸಾವನ್ನಪ್ಪಿದರು, ಎಂಟು ಮಂದಿ ಗಾಯಗೊಂಡರು ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಬಸ್‌ನ ಪ್ರಯಾಣಿಕರನ್ನು ಹರಸಾಹಸದಿಂದ ಹೊರಗೆ ತರಲಾಗಿದೆ ಎಂದು ಅವರು ಹೇಳಿದರು. ಎಂಟು ಮಂದಿ ಗಾಯಾಳುಗಳನ್ನು ಹತ್ತಿರದ ಆಸ್ಪತ್ರೆಗೆ ದಾಖಲು ಮಾಡಲಾಗಿದ್ದು ಕೆಲವರ ಸ್ಥಿತಿ ಗಂಭೀರವಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ವಿಕಾರಾಬಾದ್-ಹೈದರಾಬಾದ್ ಮಾರ್ಗದಲ್ಲಿ ಬೆಳಿಗ್ಗೆ 7.30 ರ ಸುಮಾರಿಗೆ ದ್ವಿಚಕ್ರ ವಾಹನವನ್ನು ಹಿಂದಿಕ್ಕುವ ಪ್ರಯತ್ನದಲ್ಲಿ ಲಾರಿ ವೇಗವಾಗಿ ಬಸ್‌ಗೆ ಡಿಕ್ಕಿ ಹೊಡೆದಿದೆ ಎನ್ನಲಾಗಿದೆ.

ಅಪಘಾತ ಸ್ಥಳಕ್ಕೆ ತೆಲಂಗಾಣ ಸಾರಿಗೆ ಸಚಿವ ಪೊನ್ನಂ ಪ್ರಭಾಕರ್ ಭೇಟಿ ನೀಡಿ ಅಪಘಾತದ ಕಾರಣದ ಬಗ್ಗೆ ಅವರು ತೆಲಂಗಾಣ ರಾಜ್ಯ ರಸ್ತೆ ಸಾರಿಗೆ ನಿಗಮ (ಟಿಜಿಎಸ್‌ಆರ್‌ಟಿಸಿ) ವ್ಯವಸ್ಥಾಪಕ ನಿರ್ದೇಶಕ ವೈ ನಾಗಿ ರೆಡ್ಡಿ ಅವರೊಂದಿಗೆ ಮಾತನಾಡಿದರು. ಅಧಿಕೃತ ಸಂವಹನದ ಪ್ರಕಾರ, ಜಲ್ಲಿ ತುಂಬಿದ ಟಿಪ್ಪರ್ ಲಾರಿ ತಪ್ಪು ಮಾರ್ಗದಿಂದ ಬಂದು ಬಸ್‌ಗೆ ಡಿಕ್ಕಿ ಹೊಡೆದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಬಜರಂಗದಳ,ವಿಹಿಂಪದಿಂದ ಅಯೋಧ್ಯ ಬಲಿದಾನ ದಿವಸ್



**ಕೋಲಾರ, ನ.3–** ಅಯೋಧ್ಯ ಬಲಿದಾನ ದಿವಸ್ ಅಂಗವಾಗಿ ವಿಹಿಂಪ ಹಾಗೂ ಬಜರಂಗದಳದಿಂದ ರಕ್ತದಾನ ಶಿಬಿರವನ್ನು ನಗರದ ಜಿಲ್ಲಾ ಎಸ್‌ಎನ್‌ಆರ್ ಆಸ್ಪತ್ರೆಯ ರಕ್ತನಿಧಿ ಕೇಂದ್ರದಲ್ಲಿ ಹಮ್ಮಿಕೊಳ್ಳುವ ಮೂಲಕ ಹೋರಾಟದಲ್ಲಿ ಮಡಿದವರಿಗೆ ಶ್ರದ್ಧಾಂಜಲಿ ಅರ್ಪಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಬಜರಂಗದಳ ಮುಖಂಡ ಬಾಲಾಜಿ, ಮರ್ಯಾದಾ ಪುರುಷೋತ್ತಮ ಶ್ರೀರಾಮನ ಪುಣ್ಯಭೂಮಿ ರಕ್ಷಣೆಗೆ ಇದೇ ದಿನ 1992 ರಲ್ಲಿ ಹೋರಾಡಿದ ಹಲವಾರು ಮಂದಿ ತಮ್ಮ ಪ್ರಾಣ ತೆತ್ತಿದ್ದರು ಎಂದು ತಿಳಿಸಿದರು.

ಮರ್ಯಾದ ಪುರುಷೋತ್ತಮ ಹುಟ್ಟಿದ ಭೂಮಿಯಾದ ಆಯೋಧ್ಯೆಯಲ್ಲಿ ರಾಮ ಹುಟ್ಟಿದ ಎಂಬುದನ್ನು ಕೋರ್ಟುಗಳಲ್ಲಿ ನಿರ್ಧರಿಸಬೇಕಾಯಿತು ಎಂದ ಅವರು ಪುರಾತತ್ವ ಇಲಾಖೆಯ ದಾಖಲೆಗಳು ಅಲ್ಲಿ ರಾಮಮಂದಿರವಿತ್ತು ಎಂಬುದನ್ನು ಸಾಕ್ಷೀಕರಿಸುವ ಮೂಲಕ ದೇಶದಲ್ಲಿ ರಾಮನೇ ಇಲ್ಲ ಎನ್ನುವವರಿಗೆ ಉತ್ತರ ಸಿಕ್ಕಂತಾಗಿದೆ ಎಂದರು. ಹಲವರ ಪ್ರಾಣಾರ್ಪಣೆಯಿಂದಲೇ ಇಂದು ಅಯೋಧ್ಯ ರಾಮನ ಜನ್ಮಭೂಮಿ ಇಂದು ಮಾನ್ಯತೆ ಪಡೆದುಕೊಂಡಿದೆ, ಅಲ್ಲಿ ರಾಮನ ಬೃಹತ್ ದೇವಾಲಯ ನಿರ್ಮಾಣವಾಗಿದ್ದು, ಇದು ರಾಮಭಕ್ತರಿಗೆ ಸಿಕ್ಕ ಗೆಲುವು ಎಂದು ಭಾವಿಸಲಾಗಿದೆ ಎಂದರು

ಬಜರಂಗದಳ ಜಿಲ್ಲಾ ಸಂಚಾಲಕ ಬಾಬು ಮಾತನಾಡಿ ರಾಮ ಮಂದಿರ ನಿರ್ಮಾಣ ನಮ್ಮ ಧ್ಯೇಯ ಎಂದ ಅನೇಕರು ಹೋರಾಟದಲ್ಲಿ ಪಾಲ್ಗೊಂಡಿದ್ದರು, ಇಂದು ವಿವಾದಿತ ಜಾಗವನ್ನು ರಾಮನದ್ದೆ ಎಂದು ಹೇಳಿದ್ದಲ್ಲದೇ ಅಲ್ಲಿ ಭವ್ಯ ರಾಮಮಂದಿರ ನಿರ್ಮಾಣವಾಗಿ ದೇಶಕ್ಕೆ ಸಮರ್ಪಣೆಯಾಗಿರುವುದು ರಾಮ ಭಕ್ತರಿಗೆ ಸಿಕ್ಕ ಗೆಲುವು ಎಂದು ಪ್ರತಿಪಾದಿಸಿದರು.

ವಿಹಿಂಪ ಕೋಲಾರ ವಿಭಾಗದ ಸಂಘಟನಾ ಉಪಾಧ್ಯಕ್ಷ ಸಾಗರ್ ಮಾತನಾಡಿ, ಇಂದು ಹಿಂದೂಗಳ ಆರಾಧ್ಯದೈವ ಶ್ರೀರಾಮನ ಸುಂದರ ದೇವಾಲಯ ನಿರ್ಮಾಣವಾಗುತ್ತಿದ್ದು, ಇದು ನೂರಾರು ವರ್ಷಗಳ ಹೋರಾಟಕ್ಕೆ ಸಂದ ಜಯವಾಗಿದೆ ಎಂದು ಬಣ್ಣಿಸಿದರು.ರಾಮ ಜನ್ಮಭೂಮಿಗಾಗಿ ನಡೆದ ಹೋರಾಟದಲ್ಲಿ ಪ್ರಾಣ ತೆತ್ತು, ರಾಮಮಂದಿರ ನಿರ್ಮಾಣದ ಸಾರ್ಥಕತೆ ಸಾಧಿಸಿದ ಈ ಹೋರಾಟಗಾರರ ನೆನಪಿನಲ್ಲಿ ಮತ್ತಷ್ಟು ಸಾಮಾಜಿಕ ಚಟುವಟಿಕೆ ನಡೆಸುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಬಜರಂಗದಳ ಶ್ರೀಧರ್, ವಿಶ್ವನಾಥ್, ರಾಜು, ಸಾಯಿಸುಮನ್, ಸಾಯಿಮೌಳಿ, ತೇಜಸ್, ಚಿಕ್ಕ,ವಿಶಾಖ,

# ಪ್ರಧಾನಿ ಮೋದಿ, ಅಮಿತ್ ಶಾ, ಯೋಗಿ ವಿರುದ್ಧ ಆಕ್ಷೇಪಾರ್ಹ ಪೋಸ್ಟ್ ಮಾಡಿದ್ದ ಕಿಡಿಗೇಡಿ ಬಂಧನ

**ಲಕ್ನೋ, ನ.3–** ಪ್ರಧಾನಿ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗೂ ಉತ್ತರಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರ ವಿರುದ್ಧ ಸಾಮಾಜಿಕ ಜಾಲತಾಣಗಳಲ್ಲಿ ಆಕ್ಷೇಪಾರ್ಹ ಪೋಸ್ಟ್ ಮಾಡಿದ್ದ ವ್ಯಕ್ತಿ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ.

ಪೊಲೀಸರ ಪ್ರಕಾರ, ಈ ಮೂವರು ನಾಯಕರ ಚಿತ್ರಗಳು ಮತ್ತು ಅಶ್ಲಿಲ ಹಾಡನ್ನು ಹೊಂದಿರುವ ಪೋಸ್ಟ್ ನವೆಂಬರ್ 1 ರಂದು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಆ ಪ್ರದೇಶದಲ್ಲಿ ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಯಿತು.

ಚಕ್ಜಿತ್ ರಾಯ್ ಗ್ರಾಮದ ಗ್ರಾಮ ಕಾವಲುಗಾರ (ಚೌಕಿದಾರ್) ಜೈಪಾಲ್ ಗೌತಮ್ ಸಲ್ಲಿಸಿದ ದೂರಿನ ಆಧಾರದ ಮೇಲೆ ಸೂರ್ಯವಾನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಇಟಿಪೆಕ್ಟರ್ ಅಜಿತ್ ಕುಮಾರ್ ಶ್ರಿವಾಸ್ತವ ತಿಳಿಸಿದ್ದಾರೆ.ಆರೋಪಿಯನ್ನು ಅದೇ ಪೊಲೀಸ್ ಠಾಣೆ ವ್ಯಾಪ್ತಿಯ ಹರಿಪುರ ಗ್ರಾಮದ ನಿವಾಸಿ ಆಕಾಶ್ ಯಾದವ್ ಎಂದು ಗುರುತಿಸಲಾಗಿದೆ.

ಭಾರತೀಯ ನ್ಯಾಯ ಸಂಹಿತಾ (ಬಿಎನ್‌ಎಸ್) ಸೆಕ್ಷನ್ 196 (1)(ಎ) (ಧರ್ಮಗಳು, ಜನಾಂಗ, ಸ್ಥಳ ಇತ್ಯಾದಿಗಳ ಆಧಾರದ ಮೇಲೆ ವಿವಿಧ ಗುಂಪುಗಳ ನಡುವೆ ದ್ವೇಷವನ್ನು ಉತ್ತೆಜಿಸುವುದು) ಮತ್ತು ಮಾಹಿತಿ ತಂತ್ರಜ್ಞಾನ ಕಾಯ್ದೆಯ ಸೆಕ್ಷನ್ 67 ರ ಅಡಿಯಲ್ಲಿ ಅವರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂದು ಅಧಿಕಾರಿ ತಿಳಿಸಿದ್ದಾರೆ.

ಪೊಲೀಸರು ಉಳಿದ ಆರೋಪಿಗಳಿಗಾಗಿ ಹುಡುಕಾಟ ಆರಂಭಿಸಿದ್ದಾರೆ ಮತ್ತು ಮುಂದಿನ ಕಾನೂನು ಕ್ರಮಗಳು ನಡೆಯುತ್ತಿವೆ ಎಂದು ಶ್ರಿವಾಸ್ತವ ಹೇಳಿದರು.

# ಜೂಜಾಟ: 7 ಜನರ ಬಂಧನ

**ಕಲಬುರಗಿ,ನ.3–**ನಗರದ ಶಹಾಬಜಾರ್ ಡೆಂಗಿ ಗಲ್ಲಿಯಲ್ಲಿ ಜೂಜಾಟವಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ಚೌಕ್ ಪೊಲೀಸ್ ಠಾಣೆ ಮುಖ್ಯ ಪೇದೆ ಶಿವಾನಂದ, ಸಿಬ್ಬಂದಿಗಳಾದ ತೌಸೀಫ್ ಹುಸೇನ್, ಜಗನ್ನಾಥ ಅವರು ದಾಳಿ ನಡೆಸಿ 7 ಜನರನ್ನು ಬಂಧಿಸಿದ್ದಾರೆ.ಬಸವರಾಜ ಕಲ್ಲೂರ, ನಾಗರಾಜ ಕಾಳೆ, ಸೂರ್ಯಕಾಂತ ಪಾಟೀಲ, ಬಸವರಾಜ ಪಾಳೇದ, ಶರಣಬಸಪ್ಪ ತೋಟದ, ಸಂಗಪ್ಪ ಕೋರೆ, ಶಿವಪುತ್ರ ಸುತಾರ ಎಂಬುವವರನ್ನು ಬಂಧಿಸಿ 14,450 ರೂ.ನಗದು, ಇಸ್ಪಿಟ್ ಎಲೆಗಳನ್ನು ಜಪ್ತಿ ಮಾಡಿದ್ದಾರೆ.ಚೌಕ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಸ್ಪರ್ಧಾತ್ಮಕ ಪರೀಕ್ಷೆಗಳ ಉಚಿತ ತರಬೇತಿ ಶಿಬಿರ: ಸಹಾಯಕ ಆಯುಕ್ತರಿಂದ ಸಿದ್ದತಾ ಸಭೆ



ಯುವ ಮಾರ್ಗ ಸುದ್ದಿ

**ರಾಯಚೂರು,ನ.3–**ಜಿಲ್ಲಾಡಳಿತದಿಂದ ಹಮ್ಮಿಕೊಂಡ ಸ್ಪರ್ಧಾತ್ಮಕ ಪರೀಕ್ಷೆಗಳ ಉಚಿತ ತರಬೇತಿ ಶಿಬಿರಕ್ಕೆ ಆಸಕ್ತ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಹೆಸರು ನೋಂದಾಯಿಸಲು ಅಗತ್ಯ ವ್ಯವಸ್ಥೆ ಮಾಡಬೇಕು ಎಂದು ರಾಯಚೂರು ಸಹಾಯಕ ಆಯುಕ್ತರಾದ ಗಜಾನನ ಬಾಳೆ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಹಾಯಕ ಆಯುಕ್ತರ ಕಚೇರಿ ಸಭಾಂಗಣದಲ್ಲಿ ನವೆಂಬರ್ 3ರಂದು ನಡೆದ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳ ಉಚಿತ ತರಬೇತಿ ಶಿಬಿರದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಾಯಚೂರು ಜಿಲ್ಲೆಯ ಗ್ರಾಮೀಣ ಹಾಗೂ ನಗರ ಪ್ರದೇಶದ ವಿದ್ಯಾರ್ಥಿಗಳಿಗೆ ಯುಪಿಎಸ್ಸಿ, ಕೆಪಿಎಸ್ಸಿ ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ಸಹಾಯ ಆಗಬೇಕು ಎಂಬುದಾಗಿ ಯೋಚಿಸಿ, ಸ್ಪರ್ಧಾತ್ಮಕ ಪರೀಕ್ಷೆಗೆ ತಯಾರಿ ನಡೆಸುವ ಅಭ್ಯರ್ಥಿಗಳಿಗೆ ಅನುಕೂಲವಾಗಲು ಈ ತರಬೇತಿ ಶಿಬಿರ ಆಯೋಜಿಸಿದೆ. ನವಂಬರ್ 8 ರೊಳಗಡೆ ನೋಂದಣಿ ಮಾಡಬೇಕು. ತರಬೇತಿಯಲ್ಲಿ ಅರ್ಥಶಾಸ್ತ್ರ, ಭೌಗೋಳ ಶಾಸ್ತ್ರ, ಪರಿಸರ ಅಧ್ಯಯನ, ವಿಜ್ಞಾನ ಮತ್ತು ತಂತ್ರಜ್ಞಾನ, ಭಾರತ ಸಂವಿಧಾನ, ಇತಿಹಾಸ ಸೇರಿದಂತೆ ಹಲವು ವಿಷಯಗಳ ಕುರಿತು ನುರಿತ ಉಪನ್ಯಾಸಕರು ಬೋಧನೆ ಮಾಡಲಿದ್ದು, ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆಯುವಂತಾಗಬೇಕು ಎಂದು ತಿಳಿಸಿದರು.

ನವೆಂಬರ್ 12ರಂದು ಅರ್ಹತಾ ಪರೀಕ್ಷೆ: ಈ ತರಬೇತಿ ಶಿಬಿರದ ಅರ್ಹತಾ ಪರೀಕ್ಷೆಯನ್ನು ನವೆಂಬರ್ 12ರ ಮಧ್ಯಾಹ್ನ 3 ರಿಂದ 4.30ರವರೆಗೆ ರಾಯಚೂರಿನ ಜಿಲ್ಲಾ ರಂಗಮಂದಿರ ಹತ್ತಿರದ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನಲ್ಲಿ ನಡೆಸಲಾಗುತ್ತಿದ್ದು, ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆಯುವ ಮೊದಲ 100 ಅಭ್ಯರ್ಥಿಗಳಿಗೆ ಮಾತ್ರ ತರಬೇತಿಗೆ ಅವಕಾಶ ನೀಡಲಾಗುವುದು. ವಿದ್ಯಾರ್ಥಿಗಳು ಈಗಿನಿಂದಲೇ ಪರೀಕ್ಷೆಯ ಸಿದ್ದತೆ ಮಾಡಿಕೊಳ್ಳಬೇಕು ಎಂದು ಸಲಹೆ ಮಾಡಿದರು.

ವಸತಿ ನಿಲಯಗಳಲ್ಲಿ ಜಾಗೃತಿ ಮೂಡಿಸಿ: ಸರ್ಕಾರಿ ನೌಕರಿ ಕನಸು ಕಟ್ಟಿಕೊಂಡು ಸಾವಿರಾರು ವಿದ್ಯಾರ್ಥಿಗಳು ಓದುತ್ತಿದ್ದು, ಅಂತಹ ವಿದ್ಯಾರ್ಥಿಗಳು ಈ ಶಿಬಿರದಲ್ಲಿ ಭಾಗವಹಿಸುವಂತಾಗಲು ರಾಯಚೂರು ನಗರ ಸೇರಿದಂತೆ ಜಿಲ್ಲೆಯ ವಸತಿ ನಿಲಯಗಳ ವಿದ್ಯಾರ್ಥಿಗಳಿಗೆ ವಸತಿ ನಿಲಯಪಾಲಕರ ಮೂಲಕ ಮಾಹಿತಿ ಒದಗಿಸಲು

ಕ್ರಮ ವಹಿಸಬೇಕು ಎಂದು ಸಮಾಜ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮತ್ತ ಬಿಸಿಎಂ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ರಾಯಚೂರು ತಹಶಿಲ್ದಾರ್ ಸುರೇಶ್ ವರ್ಮ್, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ವಿರೇಶ ನಾಯಕ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕಿ ಸಿಂಧೂರು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕ ನಜೀರ್ ಅಹಮದ್, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರವೀಣ್ ಕುಮಾರ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಸುನೀತಾ ಘಟಕಾಂಬಳೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

## ನ.8ರಂದು ಕನಕ ಜಯಂತಿ ಸಾಧಕರಿಗೆ ಸನ್ಮಾನ



**ಚಿತ್ರದುರ್ಗ,ನ.3–** ಇದೇ ನವೆಂಬರ್ 08 ರಂದು ಸಂತ ಶ್ರೇಷ್ಟ ಶ್ರೀ ಭಕ್ತ ಕನಕದಾಸರ ಜಯಂತ್ಯೋತ್ಸವವನ್ನು ಅದ್ದೂರಿಯಾಗಿ ನಡೆಸಲಾಗುತ್ತಿದ್ದು, ಕಾರ್ಯಕ್ರಮದಲ್ಲಿ ಇತರೆ ಸಮಾಜದಲ್ಲಿ ಸೇವೆ ಮಾಡಿದಂತಹ ಸಾಧಕರಿಗೆ ಕನಕ ಸೇವಾರತ್ನ ಪ್ರಶಸ್ತಿಯನ್ನು ನೀಡಲಾಗುತ್ತಿದೆ ಎಂದು ಜಿಲ್ಲಾ ಕುರುಬ ಸಮಾಜದ ಪ್ರಧಾನ ಕಾರ್ಯದರ್ಶಿ ಬಿ.ಟಿ.ಜಗದೀಶ್ ಹೇಳಿದರು.

ನಗರದ ಪ್ರವಾಸಿ ಮಂದಿರದಲ್ಲಿ ಭಾನುವಾರ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ನ.08 ರಂದು ವೇದಿಕೆ ಕಾರ್ಯಕ್ರಮ ಕನಕ ವೃತ್ತದಲ್ಲಿ ಬೆಳಗ್ಗೆ 10.30 ಕ್ಕೆ ನಡೆಯಲಿದ್ದು, ಕಾರ್ಯಕ್ರಮ ನಂತರ ಮಧ್ಯಾಹ್ನ 12 ಗಂಟೆಗೆ ವಿವಿಧ ಕಲಾ ತಂಡಗಳೊಂದಿಗೆ ಜಿಲ್ಲಾ ಕುರುಬ ಸಂಘದ ಕಚೇರಿವರೆಗೂ ಮೆರವಣಿಗೆ ನಡೆಸಲಾಗುವುದು ಎಂದರು.

# ಕೊತ್ತದೊಡ್ಡಿಯಲ್ಲಿ ಹಸುವಿನ ಮೇಲೆ ಚಿರತೆ ದಾಳಿ

ಯುವ ಮಾರ್ಗ ಸುದ್ದಿ





**ಅರಕೇರಾ,ನ.3–** ತಾಲೂಕಿನ ಕೊತ್ತದೊಡ್ಡಿ ಗ್ರಾಮದ ಹಿರೆಗುಡ್ಡ ಯದಯ್ಯ ದೇವಸ್ಥಾನದ ಬಳಿಯ ಸರ್ಕಾರಿ ಪ್ರೌಢ ಶಾಲೆ ಹತ್ತಿರ ಚಿರತೆ ಹಸುವಿನ ಮೇಲೆ ದಾಳಿ ನಡೆಸಿದ ಘಟನೆ ಭಾನುವಾರ ಬೆಳಕಿಗೆ ಬಂದಿದೆ.

ಭೀಮಣ್ಣ ಗುಂತಗೋಳ ಎಂಬ ರೈತನಿಗೆ ಸೇರಿದ ಹಸುವಿನ ಮೇಲೆ ಚಿರತೆ ಶನಿವಾರ ಮಧ್ಯರಾತ್ರಿ ದಾಳಿ ನಡೆಸಿ, ಅದರ ಹೊಟ್ಟೆಯ ಭಾಗವನ್ನು ಭಗಿದು ತಿಂದಿದೆ. ಈ ಘಟನೆಯಿಂದ ಗ್ರಾಮಸ್ಥರಲ್ಲಿ ಆತಂಕ ಉಂಟಾಗಿದೆ.

ಚಿರತೆ ಪತ್ತೆಗೆ ಅರಣ್ಯಾಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಿ ಚಿರತೆಯ ಚಲನವಲನದ ಮೇಲೆ ನಿಗಾ ವಹಿಸಿದ್ದಾರೆ.

ಗ್ರಾಮಸ್ಥರು ರಾತ್ರಿ ವೇಳೆಯಲ್ಲಿ ಎಚ್ಚರಿಕೆಯಿಂದ ಇರಲು ಹಾಗೂ ಮಕ್ಕಳನ್ನು ಶಾಲೆಗೆ ಹೋಗುವ ವೇಳೆ ಸುರಕ್ಷಿತವಾಗಿ ಕಳುಹಿಸಲು ಡಂಗೂರ ಸಾರಲಾಗಿದೆ. ಚಲನವಲನ ಪತ್ತೆ ನಂತರ ಬೋನ್ ಅಳವಡಿಕೆಗೆ ಕ್ರಮ ವಹಿಸಲಾಗುವುದು ಎಂದು ದೇವದುರ್ಗ ವಲಯ ಅರಣ್ಯಾಧಿಕಾರಿ ಮೊಹಮ್ಮದ್ ಅಲಿವುದ್ದೀನ್ ಮಾಹಿತಿ ನೀಡಿದ್ದಾರೆ.

## ಅಲೆಮಾರಿ ಸಮುದಾಯವು ಸಂವಿಧಾನ ಬದ್ದ ಹಕ್ಕುಗಳನ್ನು ಪಡೆಯುವುದಕ್ಕಾಗಿ ಹೋರಾಟ ನಡೆಸಬೇಕು: ಫಾ.ಸಿಪ್ರಿಯನ್

ಯುವ ಮಾರ್ಗ ಸುದ್ದಿ



**ಮಾನ್ವಿ,ನ.3–** ಪಟ್ಟಣದ 1ನೇ ವಾರ್ಡಿನಲ್ಲಿರುವ ಸಮುದಾಯ ಭವನದಲ್ಲಿ ಲೊಯೋಲ ಸಮಾಜ ಸೇವಾ ಕೇಂದ್ರದ ವತಿಯಿಂದ ಪ್ರಾರಂಭಿಸಲಾದ ಅಲೆಮಾರಿ ಜನಾಂಗದ ಮಕ್ಕಳಿಗೆ ಸಂಜೆ ಕಲಿಕಾ ಕೇಂದ್ರವನ್ನು ಲೊಯೋಲ ಶಿಕ್ಷಣ ಸಂಸ್ಥೆಗಳು ಹಾಗೂ ಸಮಾಜ ಸೇವಾ ಕೇಂದ್ರದ ನಿರ್ದೇಶಕರಾದ ಫಾ.ಸಿಪ್ರಿಯನ್ ಉದ್ಘಾಟಿಸಿ ಮಾತನಾಡಿ ಅಲೆಮಾರಿ ಸಮುದಾಯವು ಸಮಾಜದ ಅತ್ಯಂತ ಕಟ್ಟ ಕಡೆಯ ಸಮುದಾಯವಾಗಿದ್ದು ಆರ್ಥಿಕ, ಸಾಮಾಜಿಕ,ಶೈಕ್ಷಣಿಕವಾದ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದೆ ಅದ್ದರಿಂದ ಅಲೆಮಾರಿ ಸಮುದಾಯವು ಜಾಗೃತವಾಗಿ, ಸಂಘಟಿತ ಗೊಂಡು ಸಂವಿಧಾನ ಬದ್ದ ಹಕ್ಕುಗಳನ್ನು ಪಡೆಯುವುದಕ್ಕಾಗಿ ಹೋರಾಟ ನಡೆಸುವುದರೊಂದಿಗೆ ತಮ್ಮ ಮಕ್ಕಳ ಶಿಕ್ಷಣಕ್ಕೂ ಹೆಚ್ಚಿನ ಒತ್ತು ನೀಡುವುದರಿಂದ ಉತ್ತಮ ಭವಿಷ್ಯವನ್ನು ರೂಪಿಸುವುದಕ್ಕೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಅಲೆಮಾರಿ ಸಮಾಜದ ರಾಜ್ಯ ಪ್ರಧಾನ ಕಾರ್ಯದರ್ಶಿ ಹಾಗೂ ನಿವೃತ್ತ ಶಿಕ್ಷಕರಾದ ಮಹಾದೇವಪ್ಪ ಮಾಸ್ಟರ್ ಮಾತನಾಡಿ ಅಲೆಮಾರಿ ಸಮುದಾಯದವರು ಒಂದು ನಿರ್ದಿಷ್ಟವಾದ ವಾಸ ಸ್ಥಳವಿಲ್ಲದೆ ,ಬದುಕುವುದಕ್ಕೆ ನೆಲೆ ಇಲ್ಲದೆ, ಸದಾ ನಿರಂತರವಾಗಿ ಅಲೆದಾಡುತ್ತ ಜೀವನವನ್ನು ಸಾಗಿಸುವ ಅಲೆಮಾರಿಗಳು ಡಾ.ಬಿ. ಆರ್.ಅಂಬೇಡ್ಕರ್ ಅವರ ವಿಚಾರಧಾರೆಗಳ ಅಡಿಯಲ್ಲಿ ಸಂಘಟಿತ ರಾಗಿ ನಮ್ಮ ಹಕ್ಕುಗಳನ್ನು ಪಡೆಯಲು ಹೋರಾಟ ನಡೆಸಬೇಕು ಹಾಗೂ ಶಿಕ್ಷಣಕ್ಕೆ ಹೆಚ್ಚಿನ ಅದ್ಯತೆಯನ್ನು ನೀಡುವಂತೆ ಕರೆ ನೀಡಿದರು.

ಕಲಿಕಾ ಕೇಂದ್ರದ 60ಕ್ಕೂ ಹೆಚ್ಚು ಮಕ್ಕಳಿಗೆ ನೋಟ್ ಪುಸ್ತಕಗಳನ್ನು ವಿತರಣೆ ಮಾಡಲಾಯಿತು.

ಅಲೆಮಾರಿ ಸಮುದಾಯದ ಮುಖಂಡರಾದ ಬಸಪ್ಪ, ಲಾಲಪ್ಪ, ಲಕ್ಷ್ಮಣ ಜಾನೇಕಲ್ , ಕಲಿಕಾ ಕೇಂದ್ರದ ಶಿಕ್ಷಕಿ ನಿರ್ಮಲ, ರವೀಂದ್ರ ಜಾನೇಕಲ್ ಸೇರಿದಂತೆ ಇನ್ನಿತರರು ಇದ್ದರು.

## ಕರವೇ ಪ್ರವೀಣ್ ಶೆಟ್ಟಿ ಬಣ ಕನ್ನಡ ಭಾಷೆ ,ನೆಲ,ಜಲ,ರಕ್ಷಣೆಗಾಗಿ ನಿರಂತರವಾಗಿ ಶ್ರಮಿಸುತ್ತಿದೆ: ಎ.ಬಿ.ಉಪ್ಪಳ ಮಠ

ಯುವ ಮಾರ್ಗ ಸುದ್ದಿ



**ಮಾನ್ವಿ,ನ.3–** ಪಟ್ಟಣದ ಕುವೆಂಪು ವೃತ್ತದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣ್ ಶೆಟ್ಟಿ ಬಣದ ವತಿಯಿಂದ ನಡೆದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ನಾಡದೇವಿ ಶ್ರೀ ಭುವನೇಶ್ವರಿ ದೇವಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಕನ್ನಡ ಧ್ವಜಾರೋಹಣವನ್ನು ನೆರವೇರಿಸಿ ಹಿರಿಯ ನ್ಯಾಯವಾದಿಗಳಾದ ಎ.ಬಿ.ಉಪ್ಪಳ ಮಠ ಮಾತನಾಡಿ ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣ್ ಶೆಟ್ಟಿ ಬಣದ ತಾ.ಅಧ್ಯಕ್ಷರಾದ ಸುಭಾನ್ ಬೇಗ ಅವರು ಕಳೆದ 25 ವರ್ಷಗಳಿಂದ ತಾಲೂಕಿನಲ್ಲಿ ಕನ್ನಡ ಭಾಷೆ ,ನೆಲ,ಜಲ,ರಕ್ಷಣೆಗಾಗಿ ನಿರಂತರವಾಗಿ ಹೋರಾಟಗಳನ್ನು ನಡೆಸುತ್ತ ಬಂದಿದ್ದಾರೆ. ನಾಡಿನ ಜ್ವಲಂತ ಸಮಸ್ಯೆಗಳಿಗೆ ನಾಡು,ನುಡಿಗಾಗಿ ಸದಾ ಸನ್ನದವಾಗಿರುವ ಇವರು ಮುಂದಿನ ದಿನಗಳಲ್ಲಿ ಕೂಡ ಇನ್ನಷ್ಟ ಜನಪರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಿ ಎಂದು ಹಾರೈಸಿದರು.

ಕಾರ್ಯಕ್ರಮದಲ್ಲಿ ಪಟ್ಟಣದ ಮುಸ್ಲಿಂ ಧರ್ಮ ಗುರುಗಳಾದ ಸೈಯ್ಯದ್ ಸಜ್ಜಾದ ಹುಸೇನ್ ಮತವಾಲ್ ಸಾಬ್ ಕನ್ನಡ ರಾಜ್ಯೋತ್ಸವ ಸಂದೇಶವನ್ನು ನೀಡಿದರು.

ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಉತ್ತಮ ಸಾಧನೆ ತೋರಿದ ಮಹಾನಿಯರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣ್ ಶೆಟ್ಟಿ ಬಣದ ತಾ. ಅಧ್ಯಕ್ಷರಾದ ಸುಭನ್ ಬೇಗ, ಜೆಡಿಎಸ್ ಪಕ್ಷದ ತಾಲೂಕ ಅಧ್ಯಕ್ಷರಾದ ಡಾ.ಈರಣ್ಣ ಮರ್ಲಟ್ಟಿ, ಪುರಸಭೆ ಸದಸ್ಯರಾದ ಶರಣಪ್ಪ ಮೇಧಾ, ಮುಖಂಡರಾದ ಅರವಿಂದ್ ಭಾಸ್ಕರ್, ರವಿ ಗೌಡ ಚಿಮ್ಲಾಪುರ್, ಅಖಿಲೇಶ್ ಸ್ವಾಮಿ ಕುರುಡಿ, ಸಲೀಂ, ಸಬ್ಜದ್ ಪಾಷಾ, ಗಿರಿ, ಗೋಪಿ ಸೇರಿದಂತೆ ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣ್ ಶೆಟ್ಟಿ ಬಣದ ಸಂಘಟನೆಯ ಪದಾಧಿಕಾರಿಗಳು ಸೇರಿದಂತೆ ಇನ್ನಿತರರು ಇದ್ದರು.

## ಶ್ರೀಗುರುಕುಲ ಇ– ಟೆಕ್ನೋ ಶಾಲೆಯಲ್ಲಿ 70ನೇ ಕನ್ನಡ ರಾಜ್ಯೋತ್ಸ ಆಚರಣೆ

ಯುವ ಮಾರ್ಗ ಸುದ್ದಿ



**ರಾಯಚೂರು,ನ.3–** ನಗರದ ಚಂದ್ರಾಬಂಡ ರಸ್ತೆಯಲ್ಲಿ ಬರುವ ಶ್ರೀಗುರುಕುಲ ಇ– ಟೆಕ್ನೋ ಶಾಲೆಯಲ್ಲಿ 70ನೇ ಕನ್ನಡ ರಾಜ್ಯೋತ್ಸವವನ್ನು ಅತ್ಯಂತ ಸಂಭ್ರಮದಿಂದ ಆಚರಿಸಲಾಯಿತು.

ತಾಯಿ ಭುವನೇಶ್ವರಿ ದೇವಿಯ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಲಾಯಿತು.ನಂತರ ಶ್ರೀಗುರುಕುಲ ಇ– ಟೆಕ್ನೋ ಶಾಲೆಯ ಅಧ್ಯಕ್ಷರಾದ ಶ್ರೀಸದ್ಗುರು ಮರಿಸ್ವಾಮಿ ತಾತನವರು ಮಾತನಾಡಿ ಕರುನಾಡು ನಮ್ಮ ಹೆಮ್ಮೆಯ ನಾಡು, ಕನ್ನಡ ನಮ್ಮ ಮಾತೃಭಾಷೆ, ಕನ್ನಡ ಭಾಷೆಯಾಗಿದೆ. ಇಂತಹ ಪುಣ್ಯಭೂಮಿಯಲ್ಲಿ ಜನಿಸಿರುವ ನೀವು ಕೂಡ ಕನ್ನಡ ಭಾಷಾಭಿಮಾನದ ಜೊತೆಗೆ ಜೀವನದಲ್ಲಿ ಕಠಿಣ ಪರಿಶ್ರಮದಿಂದ ವಿದ್ಯಾಭ್ಯಾಸದಲ್ಲಿ ಗುರುತಿಸಿಕೊಂಡು ಸಾಧನೆಯ ಮೂಲಕ ಶಾಲೆಗೆ ಹಾಗೂ ರಾಜ್ಯಕ್ಕೆ ಕೀರ್ತಿ ತರುವಂತಾಗಲಿ ಎಂದು ಮಕ್ಕಳಿಗೆ ಹಾರೈಸಿದರು.ಈ ಸಂದರ್ಭದಲ್ಲಿ ಶಾಲೆಯ ಮುಖ್ಯೋಪಾಧ್ಯಾಯನಿ ಹಾಗೂ ಶಿಕ್ಷಕರು, ಶಾಲಾ ಮಕ್ಕಳ ಪಾಲಕರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸಿಗೆ ಅರ್ಜಿ ಸಲ್ಲಿಸಲು ನವೆಂಬರ್ 15ರವರೆಗೂ ಅವಧಿ ವಿಸ್ತರಣೆ

**ರಾಯಚೂರು,ನ.3–**ಇಲ್ಲಿನ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ಯೋಜನೆಯಡಿ 2025–26ನೇ ಸಾಲಿನಲ್ಲಿ ಅಸಾಧಾರಣ ಪ್ರತಿಭೆಯುಳ್ಳ ಮಕ್ಕಳಿಗೆ ಜಿಲ್ಲಾ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿಯ ಅವಧಿಯನ್ನು ನವೆಂಬರ್ 15ರವರೆಗೆ ವಿಸ್ತರಿಸಲಾಗಿದೆ.

ನಾವೀನ್ಯತೆ, ತಾರ್ಕಿಕ, ಕ್ರೀಡೆ, ಕಲೆ, ಸಾಂಸ್ಕೃತಿಕ ಮತ್ತು ಸಂಗೀತ ಕ್ಷೇತ್ರಗಳಲ್ಲಿ ಅಸಾಧಾರಣ ಸಾಧನೆ ಮಾಡಿದ 05ರಿಂದ 18ವರ್ಷ ವಯೋಮಿತಿಯ ಮಕ್ಕಳ ಸಾಧನೆಯನ್ನು ಗುರುತಿಸಿ ಪ್ರೋತ್ಸಾಹಿಸಲಾಗುತ್ತದೆ.

ಆಸಕ್ತ ಅರ್ಜಿಸಲ್ಲಿಸುವ ಮಗು ಅರ್ಜಿ ನಮೂನೆಯೊಂದಿಗೆ ಇತ್ತೀಚಿನ ಭಾವಚಿತ್ರ ಲಗತ್ತಿಸಬೇಕು. ಅಸಾಧಾರಣಾ ಪ್ರತಿಭೆ ಹೊಂದಿರುವ ಬಗ್ಗೆ ಪತ್ರಿಕಾ ಪ್ರಕಟಣೆಯ ತುಣುಕು/ ಪ್ರಮಾಣ ಪತ್ರ ಲಗತ್ತಿಸಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿಗಳು ಉಪ ನಿರ್ದೇಶಕರ ಕಚೇರಿ ಮಂತ್ರಾಲಯ ರೋಡ್ ಐ.ಡಿ.ಎಸ್.ಎಮ್.ಟಿ ಲೇಜೌಟ್ ಎದುರುಗಡೆ ರಾಯಚೂರು ಇವರನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಅಥವಾ ದೂರವಾಣಿ ಸಂಖ್ಯೆ: 08532295646ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಅರಿವು ಶೈಕ್ಷಣಿಕ ಸಾಲ ಯೋಜನೆಗೆ ಅರ್ಜಿ ಆಹ್ವಾನ

**ರಾಯಚೂರು,ನ.3–** ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದಿಂದ 2025–26ನೇ ಸಾಲಿನಲ್ಲಿ ಅರಿವು ಶೈಕ್ಷಣಿಕ ಸಾಲದ ಯೋಜನೆಯಡಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಮುಸ್ಲಿಂ, ಜೈನ್, ಸಿಖ್ಖ್, ಪಾರ್ಸಿ ಅಲ್ಪಸಂಖ್ಯಾತ ಸಮುದಾಯದ ವಿಧ್ಯಾರ್ಥಿಗಳಿಂದ ಅರಿವು ರಿನ್ಯೂವಲ್ ಸಿಇಟಿ, ನೀಟ್ ಶೈಕ್ಷಣಿಕ ಸಾಲ ಯೋಜನೆಯಡಿಯಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಸಿಇಟಿ/ನೀಟ್ ನಲ್ಲಿ ಆಯ್ಕೆಯಾಗುವ (ಎಂ.ಬಿ.ಬಿ.ಎಸ್ ಎಂ.ಡಿ.ಎಸ್), ದಂತ ವೈದ್ಯಕೀಯ (ಬಿ.ಡಿಎಸ್, ಎಂ.ಡಿ.ಎಸ್) (ಬಿ.ಆಯುಷ್, ಎಂ ಆಯುಷ್), ಇಂಜಿನಿಯರಿಂಗ್,&ಟೆಕ್ನಾಲಜಿ ಬಿ.ಇ/ಬಿ.ಟೆಕ್, ಎಂ.ಇ.ಎಂ.ಟೆಕ್) ಬ್ಯಾಚುಲರ್ ಆಫ್ ಆರ್ಕಿಕ್ಚರ್ ಇಂತಹ ಕೋರ್ಸಗಳ ಅಲ್ಪಸಂಖ್ಯಾತರ ವಿದ್ಯಾರ್ಥಿಗಳು ವೆಬ್‌ಸೈಟ್ ವಿಳಾಸ: kmdconline.karnataka.gov.in ನಲ್ಲಿ ಡಿಸೆಂಬರ್ 03ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರು, ನಂ.12–11–49,1 ನೇ ಮಹಡಿ ಅಮೀರ ಟ್ರೇಡಿಂಗ್ ಕಾಂಪ್ಲೆಕ್ಸ್, ಅರಬ್ ಮೋಹಲ್ಲಾ ರಾಯಚೂರು ದೂರವಾಣಿ ಸಂಖ್ಯೆ: 08532 250825ಗೆ ಸಂಪರ್ಕ ಮಾಡಬಹುದಾಗಿದೆ ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆಮ್ ಆದ್ಮಿ ಪಕ್ಷದ ಕಾರ್ಯಕಾರಿಣಿ ಸಭೆ

**ಬಳ್ಳಾರಿ, ನ.3–** ಬಳ್ಳಾರಿ ಜಿಲ್ಲಾ ಆಮ್ ಆದ್ಮಿ ಪಕ್ಷದ ಕಾರ್ಯಕಾರಿಣಿ ಸಭೆ ಶಾಸ್ತ್ರಿನಗರದ ಜಿಲ್ಲಾ ಕಚೇರಿಯಲ್ಲಿ ನಡೆಯಿತು, ಈ ಸಭೆಯಲ್ಲಿ ಪಕ್ಷದ ರಾಜ್ಯ ಕಾರ್ಯಾಧ್ಯಕ್ಷರಾದ ಸೀತಾರಾಮ್ ಗುಂಡಪ್ಪ, ರಾಜ್ಯ ಕಾರ್ಯದರ್ಶಿಗಳಾದ ರವಿ ಕುಮಾರ್, ರಾಜ್ಯ ಸಂಘಟನಾ ಕಾರ್ಯದರ್ಶಿ ಹಾಗೂ ಬಳ್ಳಾರಿ ಉಸ್ತುವಾರಿಗಳಾದ ಅರ್ಜುನ ಹಲಗೆ ಗೌಡರ, ಜಿಲ್ಲಾಧ್ಯಕ್ಷರಾದ ಜೆ ವಿ ಮಂಜುನಾಥ, ಬಳ್ಳಾರಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಶಾಸಕ ಸ್ಥಾನದ ಪಕ್ಷದ ಪರಾಜಿತ ಅಭ್ಯರ್ಥಿ ಮಿಂಚೇರಿ ರುದ್ರಪ್ಪ, ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷರಾದ ಶ್ರೀಮತಿ ಇಂದಿರಾ ಇವರ ಸಮ್ಮುಖದಲ್ಲಿ ಸಭೆಯನ್ನು ನಡೆಸಲಾಯಿತು, ಈ ಸಭೆಯಲ್ಲಿ ಮುಂಬರುವ ತಾಲೂಕು ಪಂಚಾಯತಿ ಹಾಗು ಜಿಲ್ಲಾ ಪಂಚಾಯತಿಗಳ ಚುನಾವಣೆಯಲ್ಲಿ ಸ್ಪರ್ಧೆ ಮಾಡುವ ಕುರಿತು ಹಾಗೂ ಪಕ್ಷ ಸಂಘಟನೆಯು ಯಾವ ರೀತಿ ಮಾಡಿ ಜನಸಾಮಾನ್ಯರ ಬಳಿಗೆ ಹೋಗಿ ನಮ್ಮ ಪಕ್ಷದ ತತ್ವ ಸಿದ್ಧಾಂತಗಳನ್ನು ತಲುಪಿಸಬೇಕು, ಸಾಮಾಜಿಕ ಜಾಲತಾಣ ಯಾವ ರೀತಿ ಬಳಸಿಕೊಳ್ಳಬೇಕು, ಹಾಗೂ ಕಣ್ಣೆದುರಿಗೆ ಕಾಣುವ ಅನೇಕ ಸಾರ್ವಜನಿಕ ಸಮಸ್ಯೆಗಳನ್ನು ಹೇಗೆ ಧ್ವನಿ ಎತ್ತಿ ಪ್ರತಿಭಟಿಸಬೇಕು ಸಮಸ್ಯೆಗಳನ್ನು ಪರಿಹರಿಸಬೇಕು ಎಂಬುದರ ಬಗ್ಗೆ ಸುದೀರ್ಘವಾಗಿ ಚರ್ಚಿಸಲಾಯಿತು, ಹಾಗೂ ಸಭೆಯಲ್ಲಿ ಅನೇಕರು ಬಳ್ಳಾರಿ ನಗರದ ರಸ್ತೆ ಗುಂಡಿಗಳ ಬಗ್ಗೆ, ಕಾನೂನು ಬಾಹಿರ ಚಟುವಟಿಕೆಗಳು ಹೇಗೆ ನಡೆಯುತ್ತಿವೆ, ಎನ್ನುವುದರ ಬಗ್ಗೆ, ಮೈಕ್ರೋ ಫೈನಾನ್ಸ್ ಸಮಸ್ಯೆಗಳಿಂದ ಜನ ಹೇಗೆ ಪರದಾಡುತ್ತಿದ್ದಾರೆ, ಕಚೇರಿಗಳಲ್ಲಿ ಯಾವ ಯಾವ ರೀತಿ ಭ್ರಷ್ಟಾಚಾರ ನಡೆಯುತ್ತಿದೆ, ಎನ್ನುವುದರ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.

ಇದೇ ಸಂದರ್ಭದಲ್ಲಿ ಆಮ್ ಆದ್ಮಿ ಪಕ್ಷದ ಬಳ್ಳಾರಿ ಮಹಾನಗರ ಅಧ್ಯಕ್ಷರಾಗಿ ಡಿ. ಚಕ್ರವರ್ತಿ, ಪ್ರಧಾನ ಕಾರ್ಯದರ್ಶಿಯಾಗಿ ಅನುಗ್ರಹ ಸಂತೋಷ ಕುಮಾರ್, ಉಪಾಧ್ಯಕ್ಷರಾಗಿ ಜಾನಕಿ ರಾಮ್, ಬಳ್ಳಾರಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಅಧ್ಯಕ್ಷರಾಗಿ ಮಿಂಚೇರಿ ರುದ್ರಪ್ಪ, ಬಳ್ಳಾರಿ ಜಿಲ್ಲಾ ಓಬಿಸಿ ಘಟಕದ ಅಧ್ಯಕ್ಷರಾಗಿ ಮಣಿಕಂಠ ಆಚಾರ್, ಸಿರುಗುಪ್ಪ ತಾಲೂಕು ಘಟಕದ ಅಧ್ಯಕ್ಷರಾಗಿ ರಾಮು ನಾಯಕ್, ಜಿಲ್ಲಾ ಭ್ರಷ್ಟಾಚಾರ ವಿರೋಧಿ ಘಟಕದ ಅಧ್ಯಕ್ಷರಾಗಿ ಗಣಪಾಲ್ ರಾಘವ ರೆಡ್ಡಿ, ಜಿಲ್ಲಾ ಕಾರ್ಯದರ್ಶಿಯಾಗಿ ನಾಗರಾಜ್ ಗೌಡ, ಆಟೋ ಚಾಲಕರ ಜಿಲ್ಲಾ ಅಧ್ಯಕ್ಷರಾಗಿ ಬೆಳಗಲ್ಲು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H